ಸಂಪುಟ : 10 ಸಂಚಿಕೆ: 45 ಪುಟ : 4+2 ಬೆಲೆ: 3.00 ಸೋಮವಾರ ಮಾರ್ಚ್ 17 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 45 Pages : 4+2 Price : 3.00 Monday March 17 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

ಕೆ.ಎಚ್. ಪಾಟೀಲ ಜನ್ಮಶತಮಾನೋತ್ಸವ | ಕಾಟನ್ ಸೇಲ್ ಸೊಸೈಟಿಯ ನೂತನ ಕಟ್ಟಡದ ಉದ್ಘಾಟನಾ ಸಮಾರಂಭದಲ್ಲಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ

# ಗಟ್ಟಿ ವ್ಯಕ್ತಿತ್ವದ ಸ್ನೇಹಜೀವಿ ಕೆ.ಎಚ್. ಪಾಟೀಲ

■ ವಿಜಯಸಾಕ್ಷಿ ಸುದ್ದಿ, ಗದಗ

ಬಂಗಾರಪ್ಪ ಮಂತ್ರಿ ಮಂಡಲದಲ್ಲಿ ನಾನು ಮತ್ತು ಕೆ.ಎಚ್. ಪಾಟೀಲರು ಜೊತೆಯಾಗಿ ಕೆಲಸ ಮಾಡಿದವರು. ಅದಕ್ಕೂ ಮೊದಲು ನಾನು ವಿದ್ಯಾರ್ಥಿ ನಾಯಕನಾಗಿದ್ದಾಗ 1985ರಲ್ಲಿ ದೇವೇಗೌಡರ ವಿರುದ್ಧ ಸ್ಪರ್ಧಿಸಲು ಮೊದಲ ಬಾರಿಗೆ ಟಿಕೆಟ್ ನೀಡಿದವರು ಕೆ.ಎಚ್. ಪಾಟೀಲರು. ಅಂದಿನಿಂದ ಈವರೆಗೆ 9 ಬಾರಿ ವಿಧಾನಸಭೆಗೆ ಸ್ಪರ್ಧಿಸಿ, ಕೆ.ಎಚ್. ಪಾಟೀಲರಂತೆ ಸೋಲು–ಗೆಲುವಗಳನ್ನು ಸಮನಾಗಿ ಕಂಡಿದ್ದೇನೆ. ಗ್ರಾಮ ಪಂಚಾಯಿತಿ ಅಧ್ಯಕ್ಷ ಸ್ಥಾನದಿಂದ ಮಂತ್ರಿ ಪದವಿಯವರೆಗೆ ಕೆ.ಎಚ್. ಪಾಟೀಲರ ಸಾಧನೆ ಅಪಾರ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಸ್ಮರಿಸಿದರು.

ನಗರದ ಕಾಟನ್ ಸೇಲ್ ಸೊಸೈಟಿ ಆವರಣದಲ್ಲಿ ಭಾನುವಾರ ಕೆ.ಎಚ್. ಪಾಟೀಲ ಪ್ರತಿಷ್ಠಾನ ಆಯೋಜಿಸಿದ್ದ ಕೆ.ಎಚ್. ಪಾಟೀಲ ಜನ್ಮಶತಮಾನೋತ್ಸವ ಹಾಗೂ ಕಾಟನ್ ಸೇಲ್ ಸೊಸೈಟಿಯ ನೂತನ ಕಟ್ಟಡದ ಉದ್ಘಾಟನಾ ಸಮಾರಂಭದಲ್ಲಿ ಅವರು ಮಾತನಾಡುತ್ತಿದ್ದರು.ಎಐಸಿಸಿ ಅಧ್ಯಕ್ಷ, ರಾಜ್ಯಸಭೆ ಪ್ರತಿಪಕ್ಷ ನಾಯಕ ಮಲ್ಲಿಕಾರ್ಜುನ ಖರ್ಗೆ ಮಾತನಾಡಿ, ಸಹಕಾರಿ ಕ್ಷೇತ್ರದಲ್ಲಿ ಅಪಾರವಾದ ಆಸಕ್ತಿ ಹೊಂದಿ, ಅಷ್ಟೇ ಆಸಕ್ತಿಯಿಂದ ಕೆಲಸ ಮಾಡುತ್ತಿದ್ದ ದಿ. ಕೆ.ಎಚ್. ಪಾಟೀಲರು ಸಾಮಾಜಿಕ ನ್ಯಾಯಕ್ಕೂ ಬೆಲೆ ಕೊಡುವ ಕೆಲಸ ಮಾಡಿದವರಾಗಿದ್ದಾರೆ. ಎಲ್ಲರನ್ನೂ ಜೊತೆಯಾಗಿಸಿಕೊಂಡು ಹೋಗುತ್ತಿದ್ದ ಕೆ.ಎಚ್. ಪಾಟೀಲರಿಗೆ ಯಾರಾದರೂ ಇಷ್ಟವಾದರೆ, ಎಂಥದೇ ಕಷ್ಟ ಬಂದರೂ ಅವರ ಪರವಾಗಿ ನಿಲ್ಲುತ್ತಿದ್ದ ಸ್ನೇಹ ಜೀವಿ. ಹಾಗೆಯೇ ಯಾರ ಬಗ್ಗೆಯಾದರೂ ದ್ವೇಷ ಇದ್ದರೆ, ಅವರ ಬಗ್ಗೆ ಕಿಂಚಿತ್ತೂ ಮಾತನಾಡದ ವ್ಯಕ್ತಿತ್ವ ಅವರದು. ಅಂಥ ಗಟ್ಟಿ ವ್ಯಕ್ತಿತ್ವವನ್ನು ಕೆ.ಎಚ್. ಪಾಟೀಲರಲ್ಲಿ ಮಾತ್ರ ಕಾಣಲು ಸಾಧ್ಯ ಎಂದರು.

▸▸ 2ನೇ ಪುಟಕ್ಕೆ






ಕೆಲಸ ತೆಗೆದುಕೊಳ್ಳುವ ದಾರಿ ಎಚ್.ಕೆ. ಪಾಟೀಲರಿಗೆ ಕರಗತವಾಗಿದೆ. ಕೆಲಸ ಮಾಡಿಸಿಕೊಳ್ಳುವುದು, ಮಾಡುವುದೂ ಒಂದು ಕಲೆ. ಆ ಕಲೆ ಕರಗತವಾತದ್ದರಿಂದಲೇ ಎಚ್.ಕೆ. ಪಾಟೀಲ, ಡಿ.ಆರ್. ಪಾಟೀಲರು ತಮ್ಮ ತಂದೆಯ ಕನಸನ್ನು ನನಸು ಮಾಡಲು ಸಾಧ್ಯವಾಯಿತು. ಕೆ.ಎಚ್. ಪಾಟೀಲರ ಪುತ್ರ ಎನ್ನುವ ಕಾರಣಕ್ಕೆ ಎಚ್.ಕೆ. ಪಾಟೀಲರು ರಾಜಕೀಯಕ್ಕೆ ಬಂದಿಲ್ಲ. ಅವರು ರಾಜಕಾರಣದಲ್ಲಿ ತಮ್ಮದೇ ಆದ ಛಾಪು ಹೊಂದಿರುವ ವಿಶೇಷ ವ್ಯಕ್ತಿ ಎಂದು ಮಲ್ಲಿಕಾರ್ಜುನ ಖರ್ಗೆ ಎಚ್.ಕೆ. ಪಾಟೀಲರನ್ನು ಬಣ್ಣಿಸಿದರು.

ಸಿದ್ದನಗೌಡ ಪಾಟೀಲರು ಕಣಗಿನಹಾಳ ಗ್ರಾಮದಲ್ಲಿ ಒಂದು ಸಹಕಾರಿ ಸಂಘ ಸ್ಥಾಪನೆ ಮಾಡಿದರು. ಕೆ.ಎಚ್. ಪಾಟೀಲರು ಅಖಂಡ ಧಾರವಾಡ ಜಿಲ್ಲೆಯಲ್ಲಿ ನೂರಾರು ಸಂಘ ಸ್ಥಾಪನೆ ಮಾಡಿ, ದೇಶಾದ್ಯಂತ ಸಹಕಾರಿ ಕ್ಷೇತ್ರ ಬೆಳೆಯಲು ಕಾರಣರಾದರು. ಆ ಕಾರಣಕ್ಕಾಗಿ ಅವರನ್ನು ಸಹಕಾರಿ ರಂಗದ ಭೀಷ್ಮ ಎಂದೇ ಕರೆಯಲಾಗುತ್ತದೆ.

**– ಜಿ.ಟಿ. ದೇವೇಗೌಡ. ಶಾಸಕರು.**

ಕೆ.ಎಚ್. ಪಾಟೀಲರು ಸ್ವಚ್ಛ ಸ್ನೇಹಕ್ಕೆ ಅನ್ವರ್ಥರಾಗಿದ್ದಾರೆ. ರಾಜ್ಯದಲ್ಲಿ ಅರಣ್ಯ ಉಳಿದಿರುವುದಕ್ಕೆ, ಎಪಿಎಂಸಿ ಇನ್ನೂ ಜೀವಂತವಾಗಿರುವುದಕ್ಕೆ ಕೆ.ಎಚ್. ಪಾಟೀಲ ಕೊಡುಗೆ ಅಪಾರ. ರೈತರು ಬೆಳೆದ ಬೆಳೆಗೆ ವೈಜ್ಞಾನಿಕ ಬೆಲೆ ಸಿಗಬೇಕು ಎಂದು ಕೆ.ಎಚ್. ಪಾಟೀಲರು ದಶಕಗಳ ಹಿಂದೆಯೇ ಕನಸು ಕಂಡಿದ್ದರು.

**– ಈಶ್ವರ ಖಂಡ್ರೆ. ಅರಣ್ಯ ಸಚಿವರು.**

## ಜಿಲ್ಲಾ ಆಸ್ಪತ್ರೆಗೆ ಕೆ.ಎಚ್. ಪಾಟೀಲ ಹೆಸರು ನಾಮಕರಣ



ಸಹಕಾರಿ ರಂಗಕ್ಕೆ ಅವಿಸ್ಮರಣೀಯ ಕೊಡುಗೆ ನೀಡಿದ ಕೆ.ಎಚ್. ಪಾಟೀಲರು ನಿಷ್ಠುರವಾದಿ ಹಾಗೂ ಪ್ರಾಮಾಣಿಕ ರಾಜಕಾರಣಿ ಎಂದೇ ಜನಜನಿತರರಾಗಿದ್ದರು. ಗದುಗಿನ ಹುಲಕೋಟಿಯ ಗ್ರಾಮೀಣ ಸೊಗಡಿನೊಂದಿಗೆ ಬೆಳೆದ ಪಾಟೀಲರು ಶಾಸಕರಾಗಿ, ಸಚಿವರಾಗಿ, ಸಹಕಾರಿ ಧುರೀಣರಾಗಿ ಬೆಳದ ಪರಿ ಅನನ್ಯ. ಕೆ.ಎಚ್. ಪಾಟೀಲರು ವ್ಯಾವಹಾರಿಕ ಅರ್ಥದ ರಾಜಕಾರಣಿಯಾಗಿರಲಿಲ್ಲ. ಅವರೊಬ್ಬ ದಾರ್ಶನಿಕ ಧುರೀಣ–ರಾಗಿದ್ದರು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅಭಿಪ್ರಾಯಪಟ್ಟಿದ್ದಾರೆ.

ಮಾಜಿ ಸಚಿವ ಕೆ.ಎಚ್. ಪಾಟೀಲರ ಜನ್ಮಶತಮಾನೋತ್ಸವ ಮತ್ತು ಗದಗ ಕೋ–ಆಪರೇಟೀವ್ ಕಾಟನ್ ಸೇಲ್ಸ್ ಸೊಸೈಟಿಯ ನೂತನ ಕಟ್ಟಡದ ಉದ್ಘಾಟನಾ ಸಮಾರಂಭದಲ್ಲಿ ವೈದ್ಯಕೀಯ ಕಾರಣಗಳಿಂದಾಗಿ ಅನುಪಸ್ಥಿತರಿದ್ದ ಅವರು ತಮ್ಮ ಸಂದೇಶ ಪತ್ರವನ್ನು ರವಾನಿಸಿ, ಕೆ.ಎಚ್. ಪಾಟೀಲರು ಭವಿಷ್ಯವನ್ನು ಉತ್ತಮಗೊಳಿಸುವ, ರೈತರ ಹಿತ ಕಾಪಾಡುವ, ಶೋಷಣೆ ಮುಕ್ತ ಸಮಾಜ ನಿರ್ಮಾಣ ಮಾಡುವ ಆಶಯವನ್ನು ಸದಾ ಹೊಂದಿದ್ದರು. ತಮ್ಮ ಆದರ್ಶಗಳಿಂದಾಗಿ ಅವರು ಇತರರಿಗೂ ಅನುಕರಣೀಯರಾಗಿದ್ದರು.

ಸಚಿವರಾಗಿ, ಕೆಪಿಸಿಸಿ ಅಧ್ಯಕ್ಷರಾಗಿ ಸೇವೆ ಸಲ್ಲಿಸಿದ ಪಾಟೀಲರು, ಸಂಘಟನಾ ಚತುರರು ಹಾಗೂ ಆಡಳಿತದಲ್ಲಿ ನಿಪುಣರಾಗಿದ್ದರು. ಜನಹಿತವನ್ನೇ ಕಾಯಕವಾಗಿಸಿಕೊಂಡಿದ್ದ ಕೆ.ಎಚ್. ಪಾಟೀಲರ ನೇತೃತ್ವದಲ್ಲಿ ರಾಜ್ಯದ ಸಹಕಾರಿ ಕ್ಷೇತ್ರ ಸದೃಢ ಬೆಳವಣಿಗೆಯನ್ನು ಕಂಡಿತು. ದೇಶದ ಆರ್ಥಿಕ ಹಾಗೂ ಸಾಮಾಜಿಕ ಬೆಳವಣಿಗೆಗೆ ಸಹಕಾರ ಕ್ಷೇತ್ರದ ಕೊಡುಗೆ ಅಪಾರವಾಗಿದ್ದು, ಈ ಕ್ಷೇತ್ರಕ್ಕೆ ಗದುಗಿನ ಗ್ರಾಮವೊಂದರಲ್ಲೇ ಮುನ್ನುಡಿ ಬರೆಯಲಾಗಿದ್ದು ವಿಶೇಷ.

ಕೃಷಿ ವಿಜ್ಞಾನ ಕೇಂದ್ರ ಸ್ಥಾಪನೆ, ಕೃಷಿಯಲ್ಲಿ ನೂತನ ತಂತ್ರಜ್ಞಾನ ಬಳಕೆ, ಮಣ್ಣು ಮತ್ತು ನೀರಿನ ಸಂರಕ್ಷಣೆ, ಸಾವಯವ ಕೃಷಿ ಬೆಳೆಗಳಿಗೆ ಮಾರುಕಟ್ಟೆ ವ್ಯವಸ್ಥೆ, ಕೃಷಿಕರಿಗೆ ತರಬೇತಿಯಂತಹ ಕಾರ್ಯಕ್ರಮಗಳು, ಪಾಟೀಲರ ರೈತಪರ ಕಾಳಜಿಗೆ ಕನ್ನಡಿ ಹಿಡಿದಿವೆ. ಆರ್ಥಿಕವಾಗಿ ಹಿಂದುಳಿದ ಹಾಗೂ ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣವನ್ನು ನೀಡುವ ಸಂಕಲ್ಪದೊಂದಿಗೆ ಅನೇಕ ವಿದ್ಯಾಸಂಸ್ಥೆಗಳನ್ನು ಸ್ಥಾಪಿಸಿರುವ ಹೆಗ್ಗಳಿಕೆ ಪಾಟೀಲರದ್ದಾಗಿದೆ.

ಆರ್ಥಿಕವಾಗಿ ಹಿಂದುಳಿದ ಹಾಗೂ ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣವನ್ನು ನೀಡುವ ಸಂಕಲ್ಪದೊಂದಿಗೆ ಅನೇಕ ವಿದ್ಯಾಸಂಸ್ಥೆಗಳನ್ನು ಸ್ಥಾಪಿಸಿರುವ ಹೆಗ್ಗಳಿಕೆ ಪಾಟೀಲರದ್ದು.

1970ರ ದಶಕದಲ್ಲಿ ದೇವರಾಜ ಅರಸು ಅವರ ನೇತೃತ್ವದ ಸಂಪುಟದಲ್ಲಿ ಕೆ.ಹೆಚ್. ಪಾಟೀಲರು ಅರಣ್ಯ ಸಚಿವರಾಗಿದ್ದರು. ಮೈಸೂರಿನ ಹೆಚ್.ಡಿ. ಕೋಟೆಯಲ್ಲಿ ಜನರಿಂದ ಅವ್ಯಾಹತವಾಗಿ ಅರಣ್ಯ ನಾಶವನ್ನು ಕಂಡ ಪಾಟೀಲರು ಮರ ಕಡಿಯುವುದನ್ನು ನಿಷೇಧಿಸಲು ಆ ಸಂದರ್ಭದಲ್ಲಿ ಬಿಗಿ ಕಾನೂನುಗಳನ್ನು ತಂದರು.

▸▸ 2ನೇ ಪುಟಕ್ಕೆ

## ಗ್ರಾ.ಪಂ ಕಟ್ಟಡ ಉದ್ಘಾಟಿಸಿದ ಸಚಿವ ಎಚ್.ಕೆ. ಪಾಟೀಲ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ತಾಲೂಕಿನ ಬಿಂಕದಕಟ್ಟಿಯಲ್ಲಿ ನಿರ್ಮಾಣಗೊಂಡಿರುವ ನೂತನ ಗ್ರಾಮ ಪಂಚಾಯಿತಿ ಕಟ್ಟಡವನ್ನು ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್.ಕೆ. ಪಾಟೀಲ ರವಿವಾರ ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಮಾಜಿ ಶಾಸಕರಾದ ಡಿ.ಆರ್. ಪಾಟೀಲ, ಗ್ರಾ.ಪಂ ಅಧ್ಯಕ್ಷರುಗಳು, ಸದಸ್ಯರುಗಳು, ಗಣ್ಯರು, ಜಿಲ್ಲಾ ಪಂಚಾಯಿತಿ ಸಿ.ಇ.ಓ ಭರತ ಎಸ್ ಸೇರಿದಂತೆ ಸಾರ್ವಜನಿಕರು ಉಪಸ್ಥಿತರಿದ್ದರು.




## ನವೀಕೃತ ಶಾಲಾ ಕಟ್ಟಡ ಉದ್ಘಾಟನೆ

■ ವಿಜಯಸಾಕ್ಷಿ ಸುದ್ದಿ, ಗದಗ

ಸಹಕಾರಿ ರಂಗದ ಭೀಷ್ಮ ದಿವಂಗತ ಕೆ.ಎಚ್. ಪಾಟೀಲರ ಜನ್ಮಶತಮಾನೋತ್ಸವ ದಿನವಾದ ರವಿವಾರದಂದು ಹುಲಕೋಟಿಯ ಸರ್ಕಾರಿ ಮಾದರಿ ಕನ್ನಡ ಗಂಡುಮಕ್ಕಳ ಕೇಂದ್ರ ಶಾಲೆಗೆ ಭೇಟಿ ನೀಡಿ ನವೀಕೃತಗೊಂಡ ಶಾಲಾ ಕಟ್ಟಡವನ್ನು ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಮಾಜಿ ಶಾಸಕರಾದ ಡಿ.ಆರ್. ಪಾಟೀಲ, ಜಿ.ಪಂ ಸಿಇಓ ಭರತ್ ಎಸ್, ಶಾಲಾ ಸಿಬ್ಬಂಗ್ಗಳು, ಪೋಷಕರು, ಸ್ಥಳೀಯ ಮುಖಂಡರು ಸೇರಿದಂತೆ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.



## ಕಪ್ಪತ್ತಗುಡ್ಡ ಜೆಎಲ್ಆರ್ ಪ್ರಕೃತಿ ಶಿಬಿರದ ಶಂಕುಸ್ಥಾಪನೆ

■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಅರಣ್ಯ ಇಲಾಖೆ, ಕರ್ನಾಟಕ ಮೃಗಾಲಯ ಪ್ರಾಧಿಕಾರ ಹಾಗೂ ಪ್ರವಾಸೋದ್ಯಮ ಇಲಾಖೆ ಗದಗ ಇವರ ವತಿಯಿಂದ ಕಪ್ಪತ್ತಗುಡ್ಡ ಜೆಎಲ್ಆರ್ ಪ್ರಕೃತಿ ಶಿಬಿರದ ಶಂಕುಸ್ಥಾಪನೆ, ಗದಗ ಮೃಗಾಲಯದ ಅಭಿವೃದ್ಧಿಗಾಗಿ ಭೂಸ್ವಾದೀನಪಡಿಸಿಕೊಂಡ ಭೂಮಿಯ ಶಂಕುಸ್ಥಾಪನೆ, ವಲಯ ಅರಣ್ಯ ಅಧಿಕಾರಿಗಳ ನೂತನ ಕಚೇರಿ ಮತ್ತು ನೂತನ ವಸತಿಗೃಹ, ಶಿಶುಗಳಿಗೆ ಹಾಲುಣಿಸುವ ಕೊಠಡಿಗಳ ಉದ್ಘಾಟನಾ ಕಾರ್ಯಕ್ರಮ ರವಿವಾರ ಗದುಗಿನ ಬಿಂಕದಕಟ್ಟಿಯಲ್ಲಿ ಜರುಗಿತು.



ಈ ಸಂದರ್ಭದಲ್ಲಿ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ, ಅರಣ್ಯ ಸಚಿವರಾದ ಈಶ್ವರ ಖಂಡ್ರೆ, ಶಾಸಕರಾದ ಜಿ.ಎಸ್. ಪಾಟೀಲ, ರಾಜ್ಯ ವಿಧಾನಪರಿಷತ್ ಸದಸ್ಯ ಸಲೀಂ ಅಹಮದ್, ಗದಗ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಉಪ ಅರಣ್ಯ ಸಂರಕ್ಷಣಾಧಿಕಾರಿ ಸಂತೋಷಕುಮಾರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ವಿಜಯೇಂದ್ರ ನಾಡಗೀತೆಯನ್ನೊಮ್ಮೆ ಓದಲಿ

■ ವಿಜಯಸಾಕ್ಷಿ ಸುದ್ದಿ, ಗದಗ

ಮುಸ್ಲಿಮರಾಗಿರಬಹುದು, ಕ್ರಿಶ್ಚಿಯನ್, ಸಿಕ್ಕರು, ಬೌದ್ಧರು ಕೂಡ ಈ ದೇಶದ ಪ್ರಜೆಗಳು. ನಾವು ಎಲ್ಲ ಹಿಂದುಳಿದ, ಅಲ್ಪಸಂಖ್ಯಾತರ ಬಗ್ಗೆ ಚಿಂತನೆ ಮಾಡುತ್ತೇವೆ ಎಂದು ಉಪಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಪ್ರತಿಕ್ರಿಯಿಸಿದರು.

ಭಾನುವಾರ ನಗರದ ಕಾಟನ್ ಸೇಲ್ ಸೊಸೈಟಿ ಆವರಣದಲ್ಲಿ ಕೆ.ಎಚ್. ಪಾಟೀಲ್ ಜನ್ಮ ಶತಮಾನೋತ್ಸವ ಹಾಗೂ ಕಾಟನ್ ಸೇಲ್ ಸೊಸೈಟಿ ನೂತನ ಕಟ್ಟಡದ ಉದ್ಘಾಟನಾ ಕಾರ್ಯಕ್ರಮದ ನಚಿತರ ಮಾಧ್ಯಮದವರೊಂದಿಗೆ ಮಾತನಾಡಿ, ಗುತ್ತಿಗೆಯಲ್ಲಿ ಮುಸ್ಲಿಂ ಮೀಸಲಾತಿ ವಿಷಯವಾಗಿ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರರ ಟ್ವೀಟ್ ಬಗ್ಗೆ ಪ್ರತಿಕ್ರಿಯಿಸಿ ಅವರು ತಿರುಗೇಟು ನೀಡಿದರು.




ಬಿ.ವೈ. ವಿಜಯೇಂದ್ರ ಕುವೆಂಪು ಅವರ ನಾಡಗೀತೆಯನ್ನು ಒಮ್ಮೆ ಓದಲಿ. ಅಲ್ಪಸಂಖ್ಯಾತರನ್ನು ರಾಜ್ಯಸಭಾ ಸದಸ್ಯರನ್ನಾಗಿ ಮಾಡಿ, ಇಬ್ಬರು ಕ್ರಿಶ್ಚಿಯನ್ನರು, ಮೂವರು ಮುಸ್ಲಿಮರನ್ನು ಕೇಂದ್ರದಲ್ಲಿ ಮಂತ್ರಿ ಮಾಡಲಿ. ಆಗ ಸಮಬಾಳು, ಸಮಪಾಲು ಎಂದು ಮಾತನಾಡುವುದಕ್ಕೆ ವಿಜಯೇಂದ್ರ ಅವರಿಗೆ ಅವಕಾಶವಿದೆ ಎಂದು ಲೇವಡಿ ಮಾಡಿದರು.

ಬಿ.ವೈ. ವಿಜಯೇಂದ್ರರು ಈಗಷ್ಟೇ ಭಾರತೀಯ ಜನತಾ ಪಕ್ಷದ ರಾಜ್ಯಾಧ್ಯಕ್ಷರಾಗಿದ್ದಾರೆ. ಜಾಸ್ತಿ ತಲೆ ಕೆಡಿಸಿಕೊಂಡರೆ ಏನೂ ಪ್ರಯೋಜನವಿಲ್ಲ ಎಂದರು. ಮೀಸಲಾತಿ ವಿಷಯವಾಗಿ ಕೇಂದ್ರ ಸಚಿವ ಜಯಶಂಕರ್ ಹೇಳಿಕೆಗೆ ಯಾವುದೇ ಪ್ರತಿಕ್ರಿಯೆ ನೀಡದೆ, ಅವರ ಮಾತನ್ನು ನಾನು ಕೇಳಿಲ್ಲ. ಕೇಳಿದ ನಂತರ ಉತ್ತರ ಕೊಡುತ್ತೇನೆ ಎಂದಷ್ಟೇ ಹೇಳಿದರು. ಈ ಸಂದರ್ಭದಲ್ಲಿ ವಿಧಾನ ಪರಿಷತ್ ಸದಸ್ಯ ಸಲೀಂ ಅಹ್ಮದ್ ಉಪಸ್ಥಿತರಿದ್ದರು.

# ಗಟ್ಟಿ ವ್ಯಕ್ತಿತ್ವದ ಸ್ನೇಹಜೀವಿ ಕೆ.ಎಚ್. ಪಾಟೀಲ

▶▶ ಮೊದಲನೇ ಪುಟದಿಂದ

ಕಾನೂನು, ಪ್ರವಾಸೋದ್ಯಮ, ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಮಾತನಾಡಿ, ಕೆ.ಎಚ್. ಪಾಟೀಲರ ಚುನಾವಣೆ ಪ್ರಚಾರ ಭಾಷಣದಲ್ಲಿ ಜನರ ಬದುಕಿಗೆ ಅಗತ್ಯವಿರುವ ಬದಲಾವಣೆಗಳ ಕುರಿತಾದ ಚಿಂತನೆಗಳಿದ್ದವು. ಶಾಲಾ ಮಕ್ಕಳಿಗೆ ಹಾಲು, ಹೊಟ್ಟೆ ಸಿಗುವಂತಹ ಸರಕಾರ ಬರಬೇಕು, ಜನರಿಗೆ ಶುದ್ಧ ನೀರು ಕೊಡುವ ಕೆಲಸ ಆಗಬೇಕು ಎಂದು ಬಯಸಿದ್ದರು. ಅವರ ಜನ್ಮಶತಮಾನೋತ್ಸವಕ್ಕೆ 60 ಕೆಲಸಗಳನ್ನು ಮಾಡುವ ಮೂಲಕ ಅವರ ಕನಸನ್ನು ನನಸಾಗಿಸಿದ ಸಮಾಧಾನ ನನಗಿದೆ ಎಂದ ಅವರು, ಎಪಿಎಂಸಿ ವ್ಯವಸ್ಥೆ ಸ್ಥಾಪನೆಗೆ ಕೆ.ಎಚ್. ಪಾಟೀಲರು ಕಾರಣ. ಅಂಥ ವ್ಯವಸ್ಥೆ ದುರ್ಬಲಗೊಳಿಸುವ ಪ್ರಯತ್ನ ವಿಫಲಗೊಳಿಸಲಾಗಿದೆ.

ನಮ್ಮ ಹೋರಾಟಕ್ಕೆ ಜಯ ಸಿಕ್ಕಿದೆ. ಆದರೆ ರೈತರನ್ನು ಶೋಷಣೆ ಮುಕ್ತವಾಗಿಸುವ ಕನಸು ಇನ್ನೂ ನನಸಾಗಿಲ್ಲ ಎಂದರು. ಇದೇ ಸಂದರ್ಭದಲ್ಲಿ ಕೆ.ಎಚ್. ಪಾಟೀಲರ ಒಡನಾಡಿಗಳಾದ ಸಾಹಿತಿ ಜೆ.ಕೆ. ಜಮಾದಾರ, ಎಸ್.ಎಂ. ತಂಬದ, ಬಿ.ಎ. ಬ್ಯಾಳಿ, ಎಚ್.ಎಸ್. ವಾಮನಾಚಾರ್ಯ ಅವರನ್ನು ಸನ್ಮಾನಿಸಲಾಯಿತು.



ಪ್ರಾಸ್ತಾವಿಕವಾಗಿ ಮಾತನಾಡಿದ ಮಾಜಿ ಶಾಸಕ ಡಿ.ಆರ್. ಪಾಟೀಲ, ಕೆ.ಎಚ್. ಪಾಟೀಲರ ಜನ್ಮಶತಮಾನೋತ್ಸವವನ್ನು 100 ಕಾರ್ಯಕ್ರಮಗಳ ಮೂಲಕ ಅವರ ಕನಸಿನ ಯೋಜನೆಗಳನ್ನು ಜಾರಿ ಮಾಡುವ ಪ್ರಯತ್ನ ಮಾಡಿದ್ದೇವೆ ಎಂದರು.

ಸಮಾರಂಭದಲ್ಲಿ ಸರಕಾರ ಮುಖ್ಯ ಸಚೇತಕ ಸಲೀಂ ಅಹ್ಮದ್, ಸಭಾಪತಿ ಬಸವರಾಜ ಹೊರಟ್ಟಿ, ಶಾಸಕರಾದ ಜಿ.ಎಸ್. ಪಾಟೀಲ, ಶ್ರೀನಿವಾಸ ಮಾನೆ, ಸಿ.ಸಿ. ಪಾಟೀಲ, ಪ್ರಸಾದ ಅಬ್ಬಯ್ಯ, ಎ.ಎಂ. ಹಿಂಡಸಗೇರಿ, ಜಿ.ಟಿ. ಪಾಟೀಲ, ಎಸ್.ವಿ. ಸಂಕನೂರ, ಬಿ.ಆರ್. ಯಾವಗಲ್, ಎಸ್.ಜಿ. ನಂಜಯ್ಯನಮಠ, ಎನ್.ಎಚ್. ಕೋನರೆಡ್ಡಿ, ಬಿ.ಆರ್. ಯಾವಗಲ್, ರಾಮಕೃಷ್ಣ ದೊಡ್ಡಮನಿ, ಜಿ.ಎಸ್. ಗಡ್ಡದೇವರಮಠ, ಐ.ಜಿ. ಸನದಿ, ಜಿ.ಆರ್. ವೆಂಕಟೇಶ, ಯು.ಬಿ. ವೆಂಕಟೇಶ, ಬೋಸರಾಜು, ಅಜ್ಜಂಪೀರ ಖಾದ್ರಿ, ಯು.ಬಿ. ಬಣಕಾರ, ರಾಮಣ್ಣ ಲಮಾಣಿ, ಯಾಸಿರ್ ಖಾನ್ ಪಠಾಣ ಉಪಸ್ಥಿತರಿದ್ದರು.

> ಕೆ.ಎಚ್. ಪಾಟೀಲರ ವಿಚಾರ, ಆಲೋಚನೆ, ದೂರದೃಷ್ಟಿಯನ್ನು ಹೊಂದಿರುವ ಎಚ್.ಕೆ. ಪಾಟೀಲರು ಗದಗ ಜಿಲ್ಲೆಗೆ ವಿಶೇಷ ಸ್ಥಾನಮಾನ ಕಲ್ಪಿಸಿದ್ದಾರೆ. ಗದಗ ಪರಿಸರದ ಸಾರ್ವಜನಿಕ ಆಸ್ತಿಯನ್ನು ಜನರಿಗೆ ಉಪಯೋಗವಾಗುವಂತೆ ರೂಪಿಸಿದ ಗದಗ ವ್ಯಾಪಾರ, ವಾಣಿಜ್ಯ, ಸಂಸ್ಕೃತಿ ಪ್ರಾಧಿಕಾರ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿ.ವಿ, ಸಬರಮತಿ ಆಶ್ರಮದ ಪ್ರತಿರೂಪ, ಜಿಲ್ಲಾ ಆಸ್ಪತ್ರೆ, ಶುದ್ಧ ಕುಡಿಯುವ ನೀರಿನ ಘಟಕ, ಮುಕ್ತಿ ವನ ಹೀಗೆ ಅನೇಕ ಕೆಲಸಗಳ ಮೂಲಕ ಜನಸೇವೆ ಮಾಡುತ್ತಿದ್ದಾರೆ.
>
> – ಡಿ.ಕೆ. ಶಿವಕುಮಾರ್.
> ಉಪ ಮುಖ್ಯಮಂತ್ರಿಗಳು.

# ತಪ್ಪು ಮಾಹಿತಿ ನೀಡಬೇಡಿ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಲಕ್ಷ್ಮೇಶ್ವರ ಮತ್ತು ಶಿರಹಟ್ಟಿ ತಾಲೂಕುಗಳ ಬಹುತೇಕ ಎಲ್ಲ ಗ್ರಾಮಗಳಲ್ಲಿ ಜೆಜೆಎಂ ಕಾಮಗಾರಿ ಪೂರ್ಣಗೊಂಡಿಲ್ಲ. ಆದರೂ ಸಹ ಜೆಜೆಎಂ ಕಾಮಗಾರಿ ಶೇ.97ರಷ್ಟು ಮುಗಿದಿದೆ ಎಂದು ತೋರಿಸುತ್ತಿದ್ದೀರಿ ಇದು ಹೇಗೆ ಸಾಧ್ಯ? ತಪ್ಪು ಮಾಹಿತಿ ನೀಡಿ ಎಲ್ಲರನ್ನೂ ಯಾಮಾರಿಸುವ ಕೆಲಸ ಮಾಡುತ್ತಿದ್ದೀರಿ ಎಂದು ಶಾಸಕ ಡಾ. ಚಂದ್ರು ಲಮಾಣಿ ಅಧಿಕಾರಿಗಳ ವಿರುದ್ಧ ಅಸಮಾಧಾನ ಹೊರಹಾಕಿದರು.

ಅವರು ಪಟ್ಟಣದ ತಾ.ಪಂ ಸಭಾಂಗಣದಲ್ಲಿ ಶನಿವಾರ ಜರುಗಿದ ಕುಡಿಯುವ ನೀರಿನ ಸಮಸ್ಯೆ ಕುರಿತ ವಿಶೇಷ ಸಭೆಯಲ್ಲಿ ಮಾತನಾಡಿ, ಜೆಜೆಎಂ ಕಾಮಗಾರಿ ಪೂರ್ಣ ಪ್ರಮಾಣದಲ್ಲಿ ಆಗಿಲ್ಲ. ಆದರೆ ಕೇವಲ ಬಿಲ್‌ಗಾಗಿ ನೀವು ಶೇ.97 ಪ್ರಗತಿ ತೋರಿಸುತ್ತೀರಾ ಎಂದು ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡರು.

ಅಂಕಿ ಅಂಶಗಳೊಂದಿಗೆ ಮಾತನಾಡಿದ ಶಾಸಕರು, ಸುಮ್ಮನೇ ತಪ್ಪು ವರದಿ ನೀಡಬೇಡಿ ಎಂದು ಎಚ್ಚರಿಕೆ ನೀಡಿದರು. ಇದೀಗ ಬಿಸಿಲಿನ ಪ್ರಮಾಣ ಹೆಚ್ಚಾಗುತ್ತಿದ್ದು, ಜನರಿಗೆ ಕುಡಿಯುವ ನೀರನ್ನು ಸಮರ್ಪಕವಾಗಿ ಒದಗಿಸುವದು ಅಗತ್ಯವಾಗಿದೆ. ಪಶು ವೈದ್ಯಕೀಯ ಇಲಾಖೆಯವರು ಜಾನುವಾರುಗಳಿಗೆ ಮೇವಿನ ಕೊರತೆಯಗದಂತೆ ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಳ್ಳಬೇಕು ಎಂದರಲ್ಲದೆ, ಜಾನುವಾರುಗಳಿಗೆ ಕುಡಿಯುವ ನೀರು ಕಲ್ಪಿಸುವ ಅವಶ್ಯಕ ಮಾಹಿತಿ ನೀಡುವಂತೆ ತಾಕೀತು ಮಾಡಿದರು.

ಸಭೆಯಲ್ಲಿ ತಾ.ಪಂ ಇಒ ಕೃಷ್ಣಪ್ಪ ಧರ್ಮರ, ಲಕ್ಷ್ಮೇಶ್ವರ ತಹಸೀಲ್ದಾರ ವಾಸುದೇವ ವಿ.ಸ್ವಾಮಿ, ಶಿರಹಟ್ಟಿ ತಹಸೀಲ್ದಾರ ಅನಿಲ ಬಡಿಗೇರ, ಪುರಸಭೆ ಮುಖ್ಯಾಧಿಕಾರಿ ಮಹೇಶ ಹಡಪದ ಮಾತನಾಡಿದರು. 28 ಗ್ರಾ.ಪಂಗಳ ಅಭಿವೃದ್ಧಿ ಅಧಿಕಾರಿಗಳು, ವಿವಿಧ ಇಲಾಖೆಗಳ ಅಧಿಕಾರಿಗಳು ಹಾಜರಿದ್ದರು.

# ಮುಕ್ತ ವಿಶ್ವವಿದ್ಯಾನಿಲಯದಲ್ಲಿ ಕೋರ್ಸ್‌ಗಳಿಗೆ ಪ್ರವೇಶಾತಿ ಆರಂಭ

■ ವಿಜಯಸಾಕ್ಷಿ ಸುದ್ದಿ, ಗದಗ

ಮೈಸೂರಿನ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯವು ಪ್ರಸಕ್ತ 2024–25ನೇ ಜನವರಿ ಆವೃತ್ತಿಯ ಶೈಕ್ಷಣಿಕ ಸಾಲಿಗೆ ಪ್ರವೇಶಾತಿ ಪ್ರಕ್ರಿಯೆ ಆರಂಭಿಸಿದ್ದು, ಸ್ನಾತಕ ಮತ್ತು ಸ್ನಾತಕೋತ್ತರ ಕೋರ್ಸ್‌ಗಳಾದ ಬಿ.ಎ, ಬಿ.ಕಾಂ, ಬಿ.ಲಿಬ್, ಬಿ.ಬಿ.ಎ, ಬಿ.ಸಿ.ಎ, ಬಿ.ಎಸ್ಸಿ, ಬಿ.ಎಸ್.ಡಬ್ಲ್ಯೂ ಎಂ.ಎ, ಎಂ.ಎ–ಪತ್ರಿಕೋದ್ಯಮ. ಎಂ.ಕಾಂ, ಎಂ.ಬಿ.ಎ, ಎಂ.ಲಿಬ್, ಎಂ.ಎಸ್ಸಿ, ಎಂ.ಸಿ.ಎ, ಎಂ.ಎಸ್.ಡಬ್ಲ್ಯೂ ಹಾಗೂ ಡಿಪ್ಲೋಮಾ ಮತ್ತು ಪಿ.ಜಿ ಸರ್ಟಿಫಿಕೇಟ್ ಕೋರ್ಸ್‌ಗಳಿಗೆ ಪ್ರಸಕ್ತ ಶೈಕ್ಷಣಿಕ ಸಾಲಿನ ಪ್ರವೇಶಾತಿ ಆರಂಭವಾಗಿದೆ.

ವಿದ್ಯಾರ್ಥಿಗಳು ಪ್ರಾದೇಶಿಕ ಕೇಂದ್ರಕ್ಕೆ ಖುದ್ದಾಗಿ ಭೇಟಿ ನೀಡಿ ಅಧಿಕೃತ ವೆಬ್‌ಸೈಟ್ www.ksoumysuru.ac.in KSOU AdmissionPortal ಮೂಲಕ ಪ್ರವೇಶಾತಿಯ ಅರ್ಜಿಯನ್ನು ಭರ್ತಿ ಮಾಡಿಸಿಕೊಂಡ ನಚಿತರ ಆನ್‌ಲೈನ್ ಮುಖಾಂತರ ಪ್ರವೇಶಾತಿ ಶುಲ್ಕ ಪಾವತಿಸಿ ಪ್ರವೇಶಾತಿಯನ್ನು ಪಡೆಯಲು ಗದಗ ಪ್ರಾದೇಶಿಕ ನಿರ್ದೇಶಕರಾದ ಸಿದ್ಧಾರ್ಥ್ ಬಿ.ಎನ್ ತಿಳಿಸಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ, ಗದಗ ಪ್ರಾದೇಶಿಕ ಕೇಂದ್ರ, ಎಲ್.ಎಲ್. ಕಟ್ಟಡ, ಡಾ.ಪಂಡಿತ ಪುಟ್ಟರಾಜಕವಿ ಗವಾಯಿಗಳ ಖಾಸಗಿ ಕೈಗಾರಿಕಾ ತರಬೇತಿ ಸಂಸ್ಥೆ ಹತ್ತಿರ, ಜನರಲ್ ಕೆ.ಎಂ. ಕಾರ್ಯಪ್ಪ ವೃತ್ತ (ಹಳೆಯ ಡಿ.ಸಿ ಕಚೇರಿ ವೃತ್ತ), ಗದಗ–582101, ಕಚೇರಿ ದೂರವಾಣಿ ಸಂಖ್ಯೆ: 8884231002, 8970555801, 8549856177, 9008459778, 7259962717, 7338103445 ಸಂಪರ್ಕಿಸಬಹುದಾಗಿದೆ ಎಂದು ತಿಳಿಸಿದ್ದಾರೆ.

## ಬರದೂರ ಗ್ರಾಮದ ಚಟ್ಟೇರ ವಿದ್ಯಾ ವರ್ಧಕ ಸಂಘದಲ್ಲಿ ವಾರ್ಷಿಕ ಸ್ನೇಹ ಸಮ್ಮೇಳನ

# ಶಾಲಾ ವಾರ್ಷಿಕೋತ್ಸವದಿಂದ ಪ್ರತಿಭೆಗಳ ಅನಾವರಣ

■ ವಿಜಯಸಾಕ್ಷಿ ಸುದ್ದಿ, ಡಂಬಳ

ಪ್ರತಿ ಮಗುವಿನ ಬೆಳವಣಿಗೆಗೆ ಸಾಂಸ್ಕೃತಿಕ ಹಾಗೂ ಕ್ರೀಡಾ ಚಟುವಟಿಕೆಯ ಮೂಲಕ ಪ್ರತಿಭೆಗಳನ್ನು ಗುರುತಿಸಲು ಶಾಲಾ ವಾರ್ಷಿಕೋತ್ಸವ ಉತ್ತಮ ವೇದಿಕೆಯಾಗಿದೆ ಎಂದು ನಂದಿವೇರಿ ಮಠದ ಶಿವಕುಮಾರ ಮಹಾಸ್ವಾಮಿಗಳು ಹೇಳಿದರು.

ಡಂಬಳ ಹೋಬಳಿಯ ಬರದೂರ ಗ್ರಾಮದ ಚಟ್ಟೇರ ವಿದ್ಯಾ ವರ್ಧಕ ಸಂಘ, ಬಿಳಗಿ ಶ್ರೀ ಈಶ್ವರಪ್ಪ ಎಂ.ನಾಡಗೌಡ್ರ ಮತ್ತು ಬಾಳಪ್ಪ ನಾಡಗೌಡ್ರ ಇವರ ಸ್ಮರಣಾರ್ಥವಾಗಿ ಜ್ಞಾನಸೂರ್ತಿ ಇಂಟರ್‌ನ್ಯಾಶನಲ್ ಪೂರ್ವ ಪ್ರಾಥಮಿಕ ಶಾಲೆಯ ವಾರ್ಷಿಕ ಸ್ನೇಹ ಸಮ್ಮೇಳನ ಹಾಗೂ 1ರಿಂದ 5ನೇ ತರಗತಿ ಶಾಲಾ ಕಟ್ಟಡ ಉದ್ಘಾಟನೆ ಸಮಾರಂಭದ ಸಾನ್ನಿಧ್ಯ ವಹಿಸಿ ಅವರು ಮಾತನಾಡುತ್ತಿದ್ದರು.

ಮಕ್ಕಳ ಸಾಮರ್ಥ್ಯಕ್ಕೆ ಅನುಗುಣವಾಗಿ ಅವರ ಸರ್ವತೋಮುಖ ಅಭಿವೃದ್ಧಿಗೆ ಪೂರಕವಾದ ವಾತಾವರಣ ಸೃಷ್ಟಿಸುವ ನಿಟ್ಟಿನಲ್ಲಿ ಶಿಕ್ಷಕ ವೃಂದ ಹಾಗೂ ಪೋಷಕ ವರ್ಗ ಶ್ರಮಿಸುತ್ತಿರುವುದು ಶ್ಲಾಘನೀಯ ಎಂದು ಹೇಳಿದರು.

ಕಾರ್ಯಕ್ರಮ ಉದ್ಘಾಟಿಸಿದ ಮಾಜಿ ಸಚಿವ ಎಸ್.ಎಸ್. ಪಾಟೀಲ್ ಮಾತನಾಡಿ, ಸಮಾಜದಲ್ಲಿ ಒಳ್ಳೆಯವರಾಗಿ ಗುರುತಿಸಿಕೊಳ್ಳಬೇಕಾದರೆ ಒಳ್ಳೆಯ ವಿದ್ಯಾವಂತರಾಗಬೇಕು. ವಿದ್ಯಾರ್ಥಿಗಳು ಉತ್ತಮ ಅಂಕ ಪಡೆದುಕೊಂಡು ಶಾಲೆಯ, ಊರಿನ ಹಾಗೂ ತಂದೆ–ತಾಯಿಗಳಿಗೆ ಹೆಸರು ತರಬೇಕೆಂದು ಹೇಳಿದರು.



ಶಾಲಾ ಸಮಿತಿಯ ಕಾರ್ಯದರ್ಶಿ ಮೋಹನ ಚಟ್ಟೇರ್ ಮಾತನಾಡಿ, ಈ ಭಾಗದ ವಿದ್ಯಾರ್ಥಿಗಳ ಭವಿಷ್ಯ ಕಟ್ಟುವ ನಿಟ್ಟಿನಲ್ಲಿ ನಮ್ಮ ಜ್ಞಾನಸ್ಫೂರ್ತಿ ಇಂಟರ್‌ನ್ಯಾಶನಲ್ ಪೂರ್ವ ಪ್ರಾಥಮಿಕ ಶಾಲೆ ನಿರಂತರವಾಗಿ ಶ್ರಮಿಸುತ್ತಿದೆ. ವಿವಿಧ ಗ್ರಾಮಗಳಿಂದ ಬಂದ ಪಾಲಕರು ಇದರ ಸದುಪಯೋಗ ಪಡೆದುಕೊಳ್ಳಲು ಮುಂದಾಗಬೇಕು ಎಂದು ಹೇಳಿದರು. ವಿದ್ಯಾರ್ಥಿಗಳಿಂದ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು, ಕನ್ನಡ ಕೋಗಿಲೆ ಖ್ಯಾತಿಯ ಮಹನ್ಯಾ ಗುರು ಪಾಟೀಲ, ಬಿಗ್ ಬಾಸ್ ಹಾಗೂ ಸರಿಗಮಪ ಖ್ಯಾತಿಯ ಹನಮಂತ ಲಮಾಣಿ ಅವರ ಹಾಡುಗಳಿಗೆ ಅಪಾರ ಮೆಚ್ಚುಗೆ ವ್ಯಕ್ತವಾಯಿತು. ಕಾರ್ಯಕ್ರಮದಲ್ಲಿ ಗೌರಮ್ಮ ನಾಡಗೌಡ, ಸಿಪಿಐ ಮಂಜುನಾಥ ಕುಸಗಲ್, ಗಂಗಾಧರ ಅಣ್ಣಿಗೇರಿ, ಡಾ. ಪಾರ್ವತಿ ಚಟ್ಟೇರ, ವೀರನಗೌಡ ಈ ನಾಡಗೌಡ, ಮುಖ್ಯೋಪಾಧ್ಯಾಯ ಸತ್ಯಪ್ಪ ತಳವಾರ, ಎಮ್.ಜಿ. ಗಚ್ಚಿನ್ನವರ, ಎಮ್.ಎಮ್. ಹೆಬ್ಬಾಳ, ಈರಣ್ಣ ಚಟ್ಟೇರ, ಎನ್.ಎಮ್. ಕುಕನೂರ, ಹೆಚ್.ಎನ್. ಗೌಡ್ರ, ಮಾಲಿಂಗಪ್ಪ ಚಟ್ಟೇರ್, ಶಾಂತಮ್ಮ ಚಟ್ಟೇರ್, ಹನಮಪ್ಪ ನಾಡಗೌಡರ, ಸುನಿತಾ ಚಟ್ಟೇರ್, ಆನಂದ ಚಟ್ಟೇರ್, ಸೀಮಾ ಚಟ್ಟೇರ್, ಶಿವಲೀಲಾ ಕುಂಬಾರ, ತೇಜಸ್ವಿನಿ ಕುಕನೂರು, ಪ್ರಕಾಶ ಇಮ್ಮಡಿ, ಶಿವಾನಂದ ಲಮಾಣಿ, ನಿತ್ಯಾ ಮೋಹನ ಚಟ್ಟೇರ, ಎಸ್.ವಿ. ಅಡರಗಟ್ಟಿ, ಎಸ್.ವಿ. ಅರಿಶನದ, ಪೂರ್ವಿಕಾ ನಾಡಗೌಡ್ರ, ವಿಶ್ವನಾಥ ಉಳ್ಳಾಗಡ್ಡಿ, ಶಿವಾನಂದ ಲಮಾಣಿ, ಲಕ್ಷ್ಮಣ ಲಮಾಣಿ, ಶರಣಪ್ಪ ಗದಗ, ಬಸವರಾಜ ತಳವಾರ, ಗೌಸುಸಾಬ ದೋಟಿಹಾಳ, ಚನ್ನಪ್ಪ ಹೊಸಮನಿ, ಶಿವಪ್ಪ ಮೇಟಿ, ರವಿ ಮೇಟಿ ಸೇರಿದಂತೆ ಸಿಬ್ಬಂದಿ ವರ್ಗ, ಗ್ರಾಮಸ್ಥರು, ಪಾಲಕರು, ವಿದ್ಯಾರ್ಥಿಗಳು ಇದ್ದರು.

> ವೇ.ಮೂ ಗುರುಮೂರ್ತಿಸ್ವಾಮಿ ಇನಾಮದಾರ, ಬಿ.ಇ.ಒ ಎಚ್.ಎಮ್. ಫಡ್ನೇಶ್ ಮಾತನಾಡಿ, ವಿದ್ಯಾರ್ಥಿಗಳಲ್ಲಿ ಸಂಕುಚಿತ ಮನೋಭಾವನೆ ಹೋಗಲಾಡಿಸಲು ಶಾಲಾ ವಾರ್ಷಿಕೋತ್ಸವ ಉತ್ತಮವಾದ ವೇದಿಕೆಯಾಗಿದೆ. ಮಕ್ಕಳು ಕೇವಲ ಒಂದೇ ವಿಷಯಕ್ಕೆ ಸೀಮಿತವಾಗಿ ಸಾಂಸ್ಕೃತಿಕ ಚಟುವಟಿಕೆಯಲ್ಲಿ ಭಾಗವಹಿಸಲು ಹಿಂದೇಟು ಹಾಕುತ್ತಾರೆ. ಓದು–ಬರಹದ ಜೊತೆಗೆ ಉತ್ತಮವಾದ ಕಾರ್ಯಕ್ರಮಗಳಲ್ಲಿ ಭಾಗವಹಿಸುವ ಹವ್ಯಾಸವನ್ನು ಸಹ ರೂಢಿಸಿಕೊಳ್ಳುವುದು ಒಳ್ಳೆಯ ಬೆಳವಣಿಯಾಗಿದೆ ಎಂದು ಹೇಳಿದರು.

# ಜಿಲ್ಲಾ ಆಸ್ಪತ್ರೆಗೆ ಕೆ.ಎಚ್. ಪಾಟೀಲ ಹೆಸರು ನಾಮಕರಣ

▶▶ ಮೊದಲನೇ ಪುಟದಿಂದ

ಅರಣ್ಯ ಸಂಪತ್ತಿನ ಸಂರಕ್ಷಣೆಗೆ ಅಪಾರ ಕಾಳಜಿ ವಹಿಸಿದ್ದ ಕೆ.ಹೆಚ್.ಪಾಟೀಲರ ದಿಟ್ಟತನದಿಂದ ರಾಜ್ಯದ ಕಾಡುಗಳು ಇನ್ನೂ ಹಚ್ಚಹಸಿರಾಗಿಯೇ ಉಳಿದಿದೆ.

ನಮ್ಮ ರಾಜ್ಯವನ್ನು 'ಕರ್ನಾಟಕ ರಾಜ್ಯ' ಎಂದು ಅಧಿಕೃತವಾಗಿ ಘೋಷಿಸುವ ನಾಮಕರಣೋತ್ಸವ ಸಮಿತಿಗೆ ಕೆ.ಎಚ್. ಪಾಟೀಲರವರು ಅಧ್ಯಕ್ಷರಾಗಿದ್ದರು. ಗಾಂಧಿಜೀಯವರ ಆಶಯ ಹಾಗೂ ಮಾಜಿ ಪ್ರಧಾನಿ ಮನಮೋಹನ್‌ಸಿಂಗ್ ಅವರ ದೂರದೃಷ್ಟಿಯ ಪರಿಣಾಮವಾಗಿ ರಾಷ್ಟ್ರಮಟ್ಟದಲ್ಲಿ ಸಹಕಾರ ಸಂಘಗಳು ಇಂದು ಬೆಳೆದು ನಿಂತಿವೆ.ಸಹಕಾರಿ ಕ್ಷೇತ್ರದ ಮೂಲಕ ಯುವಪೀಳಿಗೆ ಬದುಕು ಕಟ್ಟಿಕೊಳ್ಳಲು ಅನುವಾಗುವಂತೆ ಹತ್ತು ಹಲವು ಯೋಜನೆಗಳನ್ನು ಸರ್ಕಾರ ಕೈಗೊಂಡಿದೆ. ಈ ಯೋಜನೆಯ ಲಾಭ ಪಡೆದು ಜನರು ಆರ್ಥಿಕವಾಗಿ ಸಬಲರಾಗುವ ಜೊತೆಗೆ ರಾಜ್ಯದ ಅಭಿವೃದ್ಧಿಗೂ ಕೈಜೋಡಿಸಲೆಂದು ಹಾರೈಸುತ್ತೇನೆ.

ಶೋಷಣೆ ಮುಕ್ತ ಸಮಾಜ, ಸಾಮಾಜಿಕ ನ್ಯಾಯ ಹಾಗೂ ಸರ್ವರಿಗೂ ಸಮಬಾಳು ಮತ್ತು ಸಮಪಾಲು ಎಂಬ ಆದರ್ಶದವನ್ನು ಸಾಕಾರಗೊಳಿಸಲು ತಮ್ಮ ಜೀವಿತಾವಧಿಯನ್ನೇ ಮುಡುಪಾಗಿಟ್ಟ ಕೆ.ಹೆಚ್. ಪಾಟೀಲರಂತಹ ಮಹಾನ್ ನಾಯಕರು ನಮಗೆಲ್ಲರಿಗೂ ಪ್ರೇರಣಾ ಶಕ್ತಿಯಾಗಿದ್ದಾರೆ.

ರಾಜ್ಯದ ಸರ್ವಾಂಗೀಣ ಅಭಿವೃದ್ಧಿಯ ಕನಸು ಹೊತ್ತು ಶ್ರಮಿಸುತ್ತಿರುವ ಸರ್ಕಾರದ ಗುರಿ ಸಾಧನೆಗೆ ಕೆ.ಹೆಚ್. ಪಾಟೀಲರು ಬಿಟ್ಟುಹೋದ ಆದರ್ಶಗಳು ನಮಗಿಂದು ದಾರಿದೀಪವಾಗಿದೆ.

ಈ ನಿಟ್ಟಿನಲ್ಲಿ ಗದುಗಿನ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಗೆ ಶ್ರೀ ಕೆ.ಎಚ್ ಪಾಟೀಲರ ಹೆಸರನ್ನು ನಾಮಕರಣ ಮಾಡಲು ನಮ್ಮ ಸರ್ಕಾರ ಕ್ರಮವಹಿಸಲಿದೆ.

ಸಮಾಜದ ಒಳಿತಿಗಾಗಿ ಶ್ರಮಿಸುವ ಕೆ.ಹೆಚ್.ಪಾಟೀಲರ ಗುಣ ವ್ಯಕ್ತಿತ್ವಗಳನ್ನು ಮೈಗೂಡಿಸಿಕೊಂಡಿರುವ ಅವರ ಮಗನಾದ ಶ್ರೀಯುತ ಹೆಚ್.ಕೆ. ಪಾಟೀಲರ ದೂರದೃಷ್ಟಿಯ ಯೋಜನೆಗಳು, ರಾಜ್ಯದ ಏಳಿಗೆಗೆ ಪೂರಕವಾಗಿರುವುದು ಶ್ಲಾಘನೀಯ. ಸತ್ಯಸಂಧತೆ, ಸರಳತೆ, ಆತ್ಮವಿಶ್ವಾಸ, ಧೈರ್ಯ ಪರಿಶ್ರಮಗಳ ಸಾಕಾರಮೂರ್ತಿಯಾಗಿದ್ದ ಕೆ.ಹೆಚ್. ಪಾಟೀಲರ ಬದುಕು ಸಾಧನೆಗಳು ಯುವಪೀಳಿಗೆಗೆ ಎಂದಿಂದಿಗೂ ಆದರ್ಶಪ್ರಾಯವಾಗಿರಲಿ ಎಂದು ಅವರು ಹಾರೈಸಿದ್ದಾರೆ.

# ಮುಖ್ಯಮಂತ್ರಿಗಳ ಪರಿಹಾರ ನಿಧಿಗೆ 1402 ಕೋಟಿ ರೂ ಚೆಕ್ ವಿತರಣೆ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಕರ್ನಾಟಕ ಸ್ಟೇಟ್ ಮಿನರಲ್ಸ್ ಕಾರ್ಪೋರೇಷನ್ ಲಿಮಿಟೆಡ್ (ಈ ಹಿಂದೆ ಮೈಸೂರು ಮಿನರಲ್ಸ್ ಸಂಸ್ಥೆ) ಗಣಿಗಾರಿಕೆಯಲ್ಲಿ ತೊಡಗಿರುವ ಕರ್ನಾಟಕ ಸರ್ಕಾರದ ಸಂಪೂರ್ಣ ಮಾಲೀಕತ್ವದ ಒಂದು ಉನ್ನತ ಸಾರ್ವಜನಿಕ ಉದ್ದಿಮೆಯಾಗಿದ್ದು, ಸಂಸ್ಥೆಯು 2023–24ನೇ ಸಾಲಿನಲ್ಲಿ ರೂ.1403.58 ಕೋಟಿ ವಹಿವಾಟು ನಡೆಸಿ ರೂ. 867.33 ಕೋಟಿ ತೆ–ರಿಗೆ ಪೂರ್ವ ಲಾಭ ಹಾಗೂ ರೂ. 643.20 ಕೋಟಿ ತೆರಿಗೆ ನಂತರದ ಲಾಭ ಗಳಿಸಿದೆ.




ಇತ್ತೀಚೆಗೆ ನಡೆದ 354ನೇ ಮಂಡಳಿ ಸಭೆಯಲ್ಲಿ ಕಂಪನಿಯು 2023–24ನೇ ಸಾಲಿನಲ್ಲಿ ಗಳಿಸಿರುವ ನಿವ್ವಳ ಲಾಭದ (ಓಜಣ ರಿಡಿಂಜಿಣ) ಮೇಲೆ ಷೇರುದಾರರಿಗೆ (ಸರ್ಕಾರಕ್ಕೆ) ರೂ.191.43 ಕೋಟಿಗಳನ್ನು ಶೇ.30 ಲಾಭಾಂಶವಾಗಿ ನೀಡಲು ಮಂಡಳಿಯ ನಿರ್ದೇಶಕರು ಒಪ್ಪಿಗೆ ನೀಡಿದ್ದು, 58ನೇ ವಾರ್ಷಿಕ ಸಾಮಾನ್ಯ ಸಭೆಯಲ್ಲಿ ಅನುಮೋದನೆಗೊಂಡಿದೆ.

ಪ್ರತಿ ವರ್ಷ ಈ ನಿಗಮದಿಂದ ರೂ.15 ಕೋಟಿಗಳನ್ನು ಮುಖ್ಯಮಂತ್ರಿಗಳ ಪರಿಹಾರ ನಿಧಿಗೆ ಆಯವ್ಯಯದಲ್ಲಿ ನಿಗದಿಪಡಿಸಲಾಗುತ್ತಿದ್ದು, 2023–24ನೇ ಸಾಲಿಗೆ ರೂ.15 ಕೋಟಿಗಳನ್ನು ನಿಗದಿಪಡಿಸಿದ್ದು, ರೂ. 15 ಕೋಟಿಗಳನ್ನು ಅರ್ಪಿಸಲಾಯಿತು.

ಮಾ.14ರಂದು ಗಣಿ ಮತ್ತು ಭೂ ವಿಜ್ಞಾನ ಸಚಿವ ಎಸ್.ಎಸ್. ಮಲ್ಲಿಕಾರ್ಜುನ, ಕರ್ನಾಟಕ ಸ್ಟೇಟ್ ಮಿನರಲ್ಸ್ ಕಾರ್ಪೋರೇಷನ್ ಅಧ್ಯಕ್ಷ ಜಿ.ಎಸ್. ಪಾಟೀಲ 2023–24ನೇ ಸಾಲಿಗೆ ಮುಖ್ಯಮಂತ್ರಿಗಳ ಪರಿಹಾರ ನಿಧಿಗೆ ರೂ.15 ಕೋಟಿಗಳ ಧನಾದೇಶವನ್ನು, ರೂ.191.43 ಕೋಟಿಗಳ ಲಾಭಾಂಶದ ಧನಾದೇಶವನ್ನು ಹಾಗೂ ರೂ.1195.63 ಕೋಟಿಗಳ ವಿಶೇಷ ಲಾಭಾಂಶವನ್ನು ಅರ್ಪಿಸಿದರು.

ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಯ ಸರ್ಕಾರದ ಕಾರ್ಯದರ್ಶಿ ರಮಣ್ ದೀಪ್ ಚೌಧರಿ, ಕೆ.ಎಸ್.ಎಮ್.ಸಿ.ಎಲ್ ವ್ಯವಸ್ಥಾಪಕ ನಿರ್ದೇಶಕ ಮಹಾಂತೇಶ್ ಬೀಳಗಿ ಹಾಗೂ ನಿಗಮದ ಅಧಿಕಾರಿಗಳು ಹಾಜರಿದ್ದರು.

## ಎಸ್.ಎಸ್.ಎಲ್.ಸಿ ವಾರ್ಷಿಕ ಪರೀಕ್ಷೆ

# ಪರೀಕ್ಷಾ ಕೇಂದ್ರಗಳ ಸುತ್ತ ಪ್ರತಿಬಂಧಕಾಜ್ಞೆ ಜಾರಿ

■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿಯು ಎಸ್.ಎಸ್.ಎಲ್.ಸಿ. ಪರೀಕೆಯನ್ನು ಮಾರ್ಚ್ 21ರಿಂದ ಏಪ್ರಿಲ್ 4ರವರೆಗೆ ಬೆಳಿಗ್ಗೆ 10.30 ಗಂಟೆಯಿಂದ ಮಧ್ಯಾಹ್ನ 1.15 ಗಂಟೆಯುವರೆಗೆ ನಡೆಸಲಿದೆ. ಪರೀಕ್ಷಾ ಸಮಯದಲ್ಲಿ ನಕಲು ಮಾಡುವುದು, ಪರೀಕ್ಷಾರ್ಥಿಗಳ ಬದಲು ಬೇರೆಯವರು ಪರೀಕ್ಷೆಗೆ ಹಾಜರಾಗುವುದು ಮುಂತಾದ ಅವ್ಯವಹಾರ ತಡೆಗಟ್ಟಲು ಮತ್ತು ಪರೀಕ್ಷಾ ಕೇಂದ್ರಗಳಲ್ಲಿ ಶಿಸ್ತು ಮತ್ತು ಶಾಂತಿ ಕಾಪಾಡುವ ಹಿತದೃಷ್ಟಿಯಿಂದ ಪರೀಕ್ಷಾ ಕೇಂದ್ರದ ಸುತ್ತಲೂ 200 ಮೀಟರ್ ಪ್ರದೇಶವನ್ನು ನಿಷೇಧಿತ ಪ್ರದೇಶವನ್ನಾಗಿ ಘೋಷಿಸಿದೆ.

ಪರೀಕ್ಷಾ ಕೇಂದ್ರಗಳಲ್ಲಿ ಶಾಂತಿ ಮತ್ತು ಸುವ್ಯವಸ್ಥೆ ಕಾಪಾಡುವ ಹಿತದೃಷ್ಟಿಯಿಂದ ಜಿಲ್ಲೆಯ 61 ಪರೀಕ್ಷಾ ಕೇಂದ್ರದ ಸುತ್ತಲೂ 200 ಮೀಟರ್ ಪರಿಮಿತಿಯೊಳಗೆ ಮಾ. 21ರಿಂದ ಏಪ್ರಿಲ್ 4ರವರೆಗೆ ಬೆಳಿಗ್ಗೆ 9.30 ಗಂಟೆಯಿಂದ ಮಧ್ಯಾಹ್ನ 2.30 ಗಂಟೆಯವರೆಗೆ ಪ್ರತಿಬಂಧಕಾಜ್ಞೆ ಜಾರಿಗೊಳಿಸಲಾಗಿದೆ.

ಪರೀಕ್ಷಾರ್ಥಿಗಳು ಹಾಗೂ ಪರೀಕ್ಷೆಯಲ್ಲಿ ಕಾರ್ಯನಿರ್ವಹಿಸುವ ಅಧಿಕಾರಿಗಳು ಮತ್ತು ಸಿಬ್ಬಂದಿಗಳನ್ನು ಹೊರತುಪಡಿಸಿ ಇತರ ಯಾವುದೇ ವ್ಯಕ್ತಿ ಅಥವಾ ಐದು ಐದಕ್ಕಿಂತ ಹೆಚ್ಚು ಜನರು ಗುಂಪು ಕೂಡುವುದು, ಅಥವಾ ವ್ಯಕ್ತಿಗಳ ಗುಂಪುಗಳ ಪ್ರವೇಶವನ್ನು ಹಾಗೂ ಅನಧಿಕೃತ ವ್ಯಕ್ತಿಗಳಿಗೆ ಪರೀಕ್ಷಾ ಕೇಂದ್ರಗಳ ಪ್ರವೇಶವನ್ನು ನಿರ್ಬಂಧಿಸಿದೆ.

ಈ ಪ್ರದೇಶ ವ್ಯಾಪ್ತಿಯಲ್ಲಿ ಬರುವ ಝುರಾಕ್ಸ್ ಅಂಗಡಿ, ಸೈಬರ್ ಸೆಂಟರ್, ಬುಕ್‌ಸ್ಟಾಲ್, ಫೋಟೋ ಕಾಪಿಯರ್‌ಗಳನ್ನು ಬಂದ್ ಮಾಡಲು ಆದೇಶಿಸಿದೆ. ಪರೀಕ್ಷಾ ದಿನಗಳಂದು ಪರೀಕ್ಷಾ ಕೇಂದ್ರಗಳಿಗೆ ವಿದ್ಯಾರ್ಥಿಗಳು ಆಗಮಿಸುವ ಸಮಯ ಮತ್ತು ಹೊರಹೋಗುವ ಸಮಯದಲ್ಲಿ ಮಾತ್ರ ಚಿತ್ರೀಕರಿಸಲು ಮಾಧ್ಯಮದವರಿಗೆ ಅವಕಾಶವಿದ್ದು, ಪರೀಕ್ಷಾ ಗೌಪ್ಯತೆ ದೃಷ್ಟಿಯಿಂದ ಪರೀಕ್ಷಾ ಕೊಠಡಿಗಳಲ್ಲಿ ಪ್ರವೇಶ, ಚಿತ್ರೀಕರಣ ಇತ್ಯಾದಿಗಳನ್ನು ಸಂಪೂರ್ಣವಾಗಿ ನಿಷೇಧಿಸಿದೆ. ಪರೀಕ್ಷಾ ಕೇಂದ್ರಗಳಲ್ಲಿ ಮೊಬೈಲ್ ಫೋನ್ ಮತ್ತು ಇತರೇ ಸಂಪರ್ಕ ಸಲಕರಣೆಗಳನ್ನು ತರುವುದನ್ನು ನಿಷೇಧಿಸಲಾಗಿದೆ ಎಂದು ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ದಂಡಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವ ಕಾರ್ಯಕ್ರಮದಲ್ಲಿ ರಂಭಾಪುರಿ ಶ್ರೀಗಳು

# ಜೀವನದಲ್ಲಿ ಬದಲಾವಣೆ, ಬೆಳವಣಿಗೆ ಎರಡೂ ಮುಖ್ಯ

■ ವಿಜಯಸಾಕ್ಷಿ ಸುದ್ದಿ, ಬಾಳೆಹೊನ್ನೂರು

ಅಸತ್ಯದಿಂದ ಸತ್ಯದೆಡೆಗೆ, ಕತ್ತಲೆಯಿಂದ ಬೆಳಕಿನೆಡೆಗೆ ಸಾವಿನಿಂದ ಸಾವಿಲ್ಲದೆಡೆಗೆ ಮುನ್ನಡೆವ ಗುರಿ ಮನುಷ್ಯನದಾಗಬೇಕು. ಮೌಲ್ಯಾಧಾರಿತ ಜೀವನ ಬದುಕಿಗೆ ಬೆಲೆ ತರುತ್ತದೆ. ಜೀವನದಲ್ಲಿ ಬದಲಾವಣೆ ಮತ್ತು ಬೆಳವಣಿಗೆ ಎರಡೂ ಮನುಷ್ಯನಿಗೆ ಮುಖ್ಯವಾಗಿವೆ ಎಂದು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಶ್ರೀ ಜಗದ್ಗುರು ರಂಭಾಪುರಿ ಪೀಠದಲ್ಲಿ ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವ ಹಾಗೂ ಕ್ಷೇತ್ರನಾಥ ಶ್ರೀ ವೀರಭದ್ರಸ್ವಾಮಿ ಮಹಾರಥೋತ್ಸವದ ಅಂಗವಾಗಿ ವಸಂತೋತ್ಸವ ಹಾಗೂ ಭದ್ರಾ ನದಿ ತೀರದಲ್ಲಿ ಸುರಗಿ ಸಮಾರಾಧನೆ ಪೂಜೆ ನೆರವೇರಿಸಿ ಆಶೀರ್ವಚನ ನೀಡುತ್ತಿದ್ದರು. ಪ್ರಾರ್ಥನೆ ಮತ್ತು ನಂಬಿಕೆ ಎರಡೂ ಕಣ್ಣಿಗೆ ಕಾಣದಿರಬಹುದು. ಆದರೆ ಅಸಾಧ್ಯವಾದುದನ್ನು ಸಾಧಿಸುವ ಶಕ್ತಿ ಎರಡಕ್ಕೂ ಇದೆ. ಆಡಿದ ಮಾತು, ಬಿಟ್ಟ ಬಾಣ, ಕಳೆದುಕೊಂಡ ಸಮಯ–ನಂಬಿಗೆ ಎಂದಿಗೂ ಮರಳಿ ಬರುವುದಿಲ್ಲ. ಅಧರ್ಮ ತಾತ್ಕಾಲಿಕವಾಗಿ ಮೇಲೇರಿದರೂ ಅಂತಿಮವಾಗಿ ಬುಡ ಸಹಿತ ಸರ್ವ ನಾಶವಾಗುತ್ತದೆ ಎಂದರು.



ಬಂದ ಎಲ್ಲ ಭಕ್ತರು ಭದ್ರಾ ನದಿಯಲ್ಲಿ ಮಂಗಲ ಸ್ನಾನ ಮಾಡಿ ತೀರ್ಥ ಪ್ರಸಾದ ಸೇವಿಸಿ ಪುನೀತರಾದರು. ಎಡೆಯೂರು ರೇಣುಕ ಶಿವಾಚಾರ್ಯರು, ಮುಕ್ತಿಮಂದಿರ ವಿಮಲ ರೇಣುಕ ಮುಕ್ತಿಮುನಿ ಶಿವಾಚಾರ್ಯರು, ಸುಳ್ಳ ಶಿವಸಿದ್ಧರಾಮೇಶ್ವರ ಶಿವಾಚಾರ್ಯರು, ಸಿದ್ಧರಬೆಟ್ಟದ ವೀರಭದ್ರ ಶಿವಾಚಾರ್ಯರು, ಮಳಲಿಮಠದ ಡಾ. ನಾಗಭೂಷಣ ಶಿವಾಚಾರ್ಯರು, ಸಂಗೊಳ್ಳಿ ಗುರುಲಿಂಗ ಶಿವಾಚಾರ್ಯರು, ಎಮ್ಮಿಗನೂರು ಮಹಂತ ಶಿವಾಚಾರ್ಯರು, ಬಿಳಕಿ ರಾಚೋಟೇಶ್ವರ ಶಿವಾಚಾರ್ಯರು, ರಾಯಚೂರು ಶಾಂತಮಲ್ಲ ಶಿವಾಚಾರ್ಯರು, ಅಮ್ಮಿನಭಾವಿ ಅಭಿನವ ಶಾಂತಲಿಂಗ ಶಿವಾಚಾರ್ಯರು, ನೆಗಳೂರು ಗುರುಶಾಂತೇಶ್ವರ ಶಿವಾಚಾರ್ಯರು, ಹಂಪಸಾಗರ ನವಲಿ ಹಿರೇಮಠದ ಅಭಿನವ ಶಿವಲಿಂಗ ರುದ್ರಮುನಿ ಶಿವಾಚಾರ್ಯರು ಸೇರಿದಂತೆ ವಿವಿಧ ಮಠಾಧೀಶರು ಸುರಗಿ ಸಮಾರಾಧನೆ ಪೂಜೆಯಲ್ಲಿ ಪಾಲ್ಗೊಂಡಿದ್ದರು.

ಲಿಂ. ಕೊಂಡಜ್ಜಿ ತೋಟಪ್ಪನವರ ಮಕ್ಕಳಾದ ಹರಿಹರದ ಕೊಂಡಜ್ಜಿ ಪಂಚಾಕ್ಷರಿ ಸಹೋದರರು, ಅಬ್ಬಿಗೇರಿ ಹಿರೇಮಠದ ಶಿಷ್ಯ ಸದ್ಭಕ್ತ ಮಂಡಳಿಯವರು ಅನ್ನ ದಾಸೋಹ ಸೇವೆ ಸಲ್ಲಿಸಿದರು.

> ದೇಹ ಶುದ್ಧಿ, ನುಡಿ ಶುದ್ಧಿ ಮತ್ತು ಮನಃಶುದ್ಧಿ ಇವುಗಳನ್ನು ಸಾಧಿಸಲು ನೆರವಾಗುವುದೇ ನಿಜವಾದ ಧರ್ಮ. ಕೈ ತುಂಬಾ ಕೆಲಸ, ಕಣ್ತುಂಬ ನಿದ್ದೆ, ಮನಸ್ಸು ತುಂಬಾ ನೆಮ್ಮದಿ, ಹೃದಯ ತುಂಬಾ ಪ್ರೀತಿ ಮತ್ತು ಆರೋಗ್ಯ ಭಾಗ್ಯ ಇರುವಂತಹ ಜನರು ಜಗತ್ತಿನಲ್ಲಿ ನಿಜವಾದ ಶ್ರೀಮಂತರು. ಒಳ್ಳೆಯ ಮನಸ್ಸು ಇದ್ದರೆ ಒಳ್ಳೆ ದಿನ ಖಂಡಿತ ಬಂದೇ ಬರುತ್ತದೆ. ಕಾಯುವ ತಾಳ್ಮೆ ಬೇಕು ಎಂದು ರಂಭಾಪುರಿ ಶ್ರೀಗಳು ಉಪದೇಶಾಮೃತವಿತ್ತು.

# ಮದ್ಯ ಮಾರಾಟ, ಸಾಗಾಟ ನಿಷೇಧ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲೆಯಾದ್ಯಂತ ಹೋಳಿ ಹಬ್ಬವನ್ನು ಮಾರ್ಚ್ 14ರಿಂದ 18ರವರೆಗೆ ಆಚರಿಸಲಾಗುತ್ತಿದೆ. ಈ ಕಾಲಕ್ಕೆ ಜಿಲ್ಲೆಯಲ್ಲಿ ಕಾನೂನು ಸುವ್ಯವಸ್ಥೆ ಮತ್ತು ಶಾಂತಿ ಪಾಲನೆ ಕಾಪಾಡಿಕೊಂಡು ಹೋಗುವ ಸಲುವಾಗಿ ಕೆಳಕಂಡ ದಿನಗಳನ್ನು ಮದ್ಯ ಸಾಗಾಟ ಮತ್ತು ಮಾರಾಟವನ್ನು ನಿಷೇಧಿಸಲಾಗಿದೆ.

ಗದಗ-ಬೆಟಗೇರಿ ಅವಳಿ ನಗರ ಹಾಗೂ ಗದಗ ಗ್ರಾಮೀಣ ಠಾಣಾ ವ್ಯಾಪ್ತಿಯ ನಗರಕ್ಕೆ ಹೊಂದಿಕೊಂಡಿರುವ ಪ್ರದೇಶ ವ್ಯಾಪ್ತಿಯಲ್ಲಿ ಮಾ. 18ರ ಬೆ 6 ಗಂಟೆಯಿಂದ ಮಾ. 18ರ ಮಧ್ಯರಾತ್ರಿಯವರೆಗೆ, ಗದಗ ಗ್ರಾಮೀಣ ಠಾಣಾ ವ್ಯಾಪ್ತಿಯ ಹಳ್ಳಿಗಳಲ್ಲಿ ಮಾ. 14ರ ಬೆಳಿಗ್ಗೆ 6 ಗಂಟೆಯಿಂದ ಮಧ್ಯರಾತ್ರಿಯವರೆಗೆ, ಮುಳಗುಂದ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಮಾ. 14ರ ಬೆ 6ರಿಂದ ಮಾ. 14ರ ಮಧ್ಯರಾತ್ರಿಯವರೆಗೆ, ಶಿರಹಟ್ಟಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಮಾ. 14ರ ಬೆ 6 ಗಂಟೆಯಿಂದ ಮಾ. 15ರ ಮಧ್ಯರಾತ್ರಿಯವರೆಗೆ, ರೋಣ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಮಾ. 14ರ ಬೆ 6 ಗಂಟೆಯಿಂದ ಮಾ. 15ರ ಮಧ್ಯರಾತ್ರಿಯವರೆಗೆ, ಗಜೇಂದ್ರಗಡ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಮಾ. 14ರ ಬೆ 6 ಗಂಟೆಯಿಂದ ಮಾ. 15ರ ಮಧ್ಯರಾತ್ರಿಯವರೆಗೆ, ನರಗುಂದ ಶಹರ ಹಾಗೂ ಪೊಲೀಸ್ ಠಾಣಾ ತಾಲೂಕು ವ್ಯಾಪ್ತಿಯಲ್ಲಿ ಮಾ. 15ರ ಬೆ 6 ಗಂಟೆಯಿಂದ ಮಾ. 15ರ ಮಧ್ಯರಾತ್ರಿಯವರೆಗೆ, ನರಗುಂದ ತಾಲೂಕಾ ವ್ಯಾಪ್ತಿಯ ಶಿರೋಳ ಗ್ರಾಮದಲ್ಲಿ ಮಾ. 16ರಂದು ಬೆ 6 ಗಂಟೆಯಿಂದ ಮಾ. 16ರ ಮಧ್ಯರಾತ್ರಿಯವರೆಗೆ, ನರೇಗಲ್ ಹಾಗೂ ಮುಂಡರಗಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಮಾ. 14ರ ಬೆ 6 ಗಂಟೆಯಿಂದ ಮಾ. 15ರ ಮಧ್ಯರಾತ್ರಿಯವರೆಗೆ, ಲಕ್ಷ್ಮೇಶ್ವರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಮಾ. 18ರ ಬೆ 6 ಗಂಟೆಯಿಂದ ಮಾ. 18ರ ಮಧ್ಯರಾತ್ರಿಯವರೆಗೆ ಮದ್ಯ ಮಾರಾಟ ಮತ್ತು ಸಾಗಾಟ ನಿಷೇಧಿಸಲಾಗಿದೆ.

ಪೊಲೀಸ್ ಠಾಣಾ ವ್ಯಾಪ್ತಿಯ ಬಾರ್‌ಗಳು, ಕ್ಲಬ್‌ಗಳು, ಬಿಯರ್, ಭಾರತೀಯ ತಯಾರಿಕೆಯ ಮದ್ಯದ ಅಂಗಡಿಗಳನ್ನು ಮೇಲ್ಕಾಣಿಸಿದ ಅವಧಿಯಲ್ಲಿ ಮುಚ್ಚತಕ್ಕದ್ದು. ಪರಿಸ್ಥಿತಿಗೆ ಅನುಗುಣವಾಗಿ ಸಾರ್ವಜನಿಕ ಶಾಂತತೆಯನ್ನು ಕಾಯ್ದುಕೊಳ್ಳುವ ದೃಷ್ಟಿಯಿಂದ ವಲಯ ಅಬಕಾರಿ ಇನ್ಸ್‌ಪೆಕ್ಟರ್ ಹಾಗೂ ಅಬಕಾರಿ ಉಪ ಆಯುಕ್ತರು ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಜಿಲ್ಲಾಧಿಕಾರಿ ಮತ್ತು ಜಿಲ್ಲಾ ದಂಡಾಧಿಕಾರಿಗಳು ತಿಳಿಸಿದ್ದಾರೆ.

### ಕಸಾಪ, ಅಭಿನಯರಂಗ ಸಹಯೋಗದಲ್ಲಿ ಡಾ. ಬಿ. ಭಾಸ್ಕರ, ಕಾವೆಂಶ್ರೀ ಅವರಿಗೆ ನುಡಿನಮನ

# ಸಾಹಿತ್ಯಾಸಕ್ತರ ಮನ ತಣಿಸಿದ ಚೇತನಗಳು

■ವಿಜಯಸಾಕ್ಷಿ ಸುದ್ದಿ, ಗದಗ

ರಂಗಭೂಮಿ ಕುರಿತು ವಿಶೇಷ ಆಸಕ್ತಿ ಹೊಂದಿ ಗದುಗಿನ ಸಾಂಸ್ಕೃತಿಕ ಪರಿಸರವನ್ನು ಶ್ರೀಮಂತಗೊಳಿಸುವಲ್ಲಿ ಡಾ. ಬಿ. ಭಾಸ್ಕರ ಅವರ ಕೊಡುಗೆ ಅಪಾರವಾದುದು. ತಮ್ಮ ಅಭಿನಯ ಮತ್ತು ಕಲಾ ಪೋಷಣೆಯನ್ನು ವೈದ್ಯಕೀಯ ವೃತ್ತಿಗಿಂತಲೂ ಹೆಚ್ಚು ಪ್ರೀತಿಸಿದವರು. ಅಭಿನಯರಂಗ ಸಂಸ್ಥೆಯ ಅಧ್ಯಕ್ಷರಾಗಿ ಮಹತ್ವದ ಕಾರ್ಯವನ್ನು ಮಾಡಿದವರು ಎಂದು ಡಾ. ಜಿ.ಬಿ. ಪಾಟೀಲ ತಿಳಿಸಿದರು.

ಅವರು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಹಾಗೂ ಅಭಿನಯರಂಗದ ಸಹಯೋಗದಲ್ಲಿ ಜರುಗಿದ ಡಾ. ಬಿ. ಭಾಸ್ಕರ ಹಾಗೂ ಕಾವೆಂಶ್ರೀ ನುಡಿನಮನ ಸಭೆಯಲ್ಲಿ ಮಾತನಾಡಿ, ಕಾವೆಂಶ್ರೀ ಅವರು ಕಲಾಚೇತನದ ಮೂಲಕ ನಾಡಿನ ಹೆಸರಾಂತ ಸಾಹಿತಿ, ಕಲಾವಿದರನ್ನು ಗದುಗಿಗೆ ಕರೆಸಿ ಸಾಹಿತ್ಯಾಸಕ್ತರ ಮನವನ್ನು ತಣಿಸುವ ಕಾರ್ಯ ಮಾಡಿದ್ದಾರೆ. ಇವರೀರ್ವರ ಅಗಲುವಿಕೆ ಸಾಂಸ್ಕೃತಿಕ ಪರಿಸರಕ್ಕೆ ತುಂಬಲಾರದ ನಷ್ಟ ಎಂದು ತಿಳಿಸಿದರು.

ರಂಗ ಕಲಾವಿದೆ ಕವಿತಾ ಕಾಶಪ್ಪನವರ ಮಾತನಾಡಿ, ನಿರ್ದೇಶಕ ಜಯತೀರ್ಥ ಜೋಶಿ ಅವರ ನಿರ್ದೇಶನದಲ್ಲಿ ಗದುಗಿನ ಕೊನೇರೆ ಹೊಂಡದಲ್ಲಿ ಅಭಿನಯಿಸಲ್ಪಟ್ಟ 'ತಲೆದಂಡ' ನಾಟಕದಲ್ಲಿ ಮಂಚಣ್ಣ ಕ್ರಮಿತ



ಪಾತ್ರದಲ್ಲಿ ಡಾ. ಬಿ. ಭಾಸ್ಕರರ ಅಭಿನಯ ರಂಗಾಸಕ್ತರು ಎಂದಿಗೂ ಮರೆಯಲು ಸಾಧ್ಯವಿಲ್ಲ. ಯುವ ಕಲಾವಿದರಿಗೆ ಸದಾ ಪ್ರೋತ್ಸಾಹ ನೀಡುತ್ತಿದ್ದರು ಎಂದರು.

ಪ್ರೊ. ಚಂದ್ರಶೇಖರ ವಸ್ತ್ರದ ಮಾತನಾಡಿ, ಕಾವೆಂಶ್ರೀ ಅವರ ಸಾಂಸ್ಕೃತಿಕ ಪ್ರೀತಿ ಅನುಕರಣೀಯ. ಕರಾವಳಿಯ ಕಲೆಯನ್ನು ಬಯಲು ಸೀಮೆಗೆ ಪರಿಚಯಿಸುವ, ಶ್ರೇಷ್ಠ ಸಾಹಿತಿ, ಕಲಾವಿದರನ್ನು ಗುರುತಿಸಿ ಗೌರವಿಸುವ ಕಾರ್ಯ ಮಾಡಿದ್ದಾರೆಂದು ತಿಳಿಸಿದರು. ಅರವಿಂದ ಹುಯಿಲಗೋಳಕರ, ಸಿ.ಕೆ. ಎಚ್. ಕಡಣಿಶಾಸ್ತ್ರೀ, ಅನಂತಮೋಹನ ಭಟ್, ಲಿಂಗರಾಜ ಬಗಲಿ ಮೊದಲಾದವರು ನುಡಿನಮನ ಸಲ್ಲಿಸಿದರು.

ಶೇಖರ ಸಜ್ಜನರ ಮಾತನಾಡಿ, ಡಾ. ಬಿ. ಭಾಸ್ಕರ ಅವರ ಸ್ಮರಣಾರ್ಥ ನಾಟಕೋತ್ಸವವನ್ನು ಏರ್ಪಡಿಸಿ ಶ್ರದ್ಧಾಂಜಲಿ ಸಲ್ಲಿಸೋಣ. ಕಲಾ ಪ್ರದರ್ಶನಕ್ಕೆ ಆರ್ಥಿಕ ಸಮಸ್ಯೆ ತಲೆದೋರದ ಹಾಗೆ ನಾವೆಲ್ಲ ಸಹಕಾರ ನೀಡೋಣ ಎಂದು ತಿಳಿಸಿದರು.

ಜಿಲ್ಲಾ ಕಸಾಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ಮಾತನಾಡಿ, ಡಾ. ಬಿ. ಭಾಸ್ಕರ ಅವರು ವ್ಯಕ್ತಿತ್ವ ವಿಕಸನದ ತರಬೇತುದಾರರಾಗಿದ್ದರು. ಮಕ್ಕಳ ಬಗೆಗಿನ ಅಪಾರವಾದ ಜ್ಞಾನವನ್ನು ಶಿಕ್ಷಕರಿಗೆ ತಲುಪಿಸುವ ಕಾರ್ಯದಲ್ಲಿ ಕೈಜೋಡಿಸಿದರು. ಅಂತೆಯೇ ಕಾವೆಂಶ್ರೀ ಅವರು 25ಕ್ಕೂ ಅಧಿಕ ವರ್ಷಗಳ ಕಾಲ ನಿರಂತರವಾಗಿ ಸಾಂಸ್ಕೃತಿಕ ಚಟುವಟಿಕೆಗಳ ಆಯೋಜನೆ ಮಾಡಿ ಗದುಗಿನ ಸಾಂಸ್ಕೃತಿಕ ಲೋಕಕ್ಕೆ ಕಳೆ ತಂದಿದ್ದಾರೆ. ಪ್ರಧಾನಮಂತ್ರಿಗಳ ಪ್ರೀತಿಗೂ ಪಾತ್ರರಾಗಿದ್ದರು ಎಂದು ತಿಳಿಸಿದರು.

> ಅಭಿನಯರಂಗದ ಸಂಸ್ಥಾಪಕ ಅಧ್ಯಕ್ಷರಾದ ಸುಶಿಲೇಂದ್ರ ಜೋಶಿ ಮಾತನಾಡಿ, ಬಿ. ಭಾಸ್ಕರ ಅವರ ಸಹಾಯ – ಸಹಕಾರದಿಂದ ಅಭಿನಯರಂಗ ಹೊಸ ರೂಪವನ್ನು ಪಡೆಯಿತು. ಅನೇಕ ನಾಟಕಗಳ ರಂಗಪ್ರಯೋಗ ಸಾಧ್ಯವಾಯಿತು. ಆರ್ಥಿಕ ಬೆಂಬಲ ದೊರೆತಿದ್ದರಿಂದ ಕಲಾಪ್ರದರ್ಶನ ನಿರಂತರವಾಗಿ ಜರುಗಲು ಅನುಕೂಲವಾಯಿತೆಂದು ತಿಳಿಸಿದರು.

ಕಿಶೋರಬಾಬು ನಾಗರಕಟ್ಟಿ ಸ್ವಾಗತಿಸಿದರು. ಡಾ. ದತ್ತಪ್ರಸನ್ನ ಪಾಟೀಲ ನಿರೂಪಿಸಿದರು. ಡಿ.ಎಸ್. ಬಾಪುರಿ ವಂದಿಸಿದರು. ಭಾರತಿ ಕೋಟಿ, ಅಕ್ಕಮಹಾದೇವಿ ರೊಟ್ಟಿಮಠ, ಆರ್.ಡಿ. ಕಪ್ಪಲಿ, ಬಸವರಾಜ ಗಣಪ್ಪನವರ, ರುದ್ರಣ್ಣ ಗುಳಗುಳಿ, ಡಾ. ಅನಂತ ಶಿವಪೂರ, ಜೆ.ಎ. ಪಾಟೀಲ, ಶರಣಪ್ಪ ಹೊಸಂಗಡಿ, ಟೀಕಾನದಾರ, ಸತೀಶ ಚನ್ನಪ್ಪಗೌಡರ ಮೊದಲಾದವರು ಭಾಗವಹಿಸಿದ್ದರು.

# ಕ್ಷಯಮಿತ್ರರನ್ನಾಗಿ ಮಾಡಿಕೊಳ್ಳಿ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾ ಕ್ಷಯರೋಗ ನಿರ್ಮೂಲನಾ ಕಾರ್ಯಕ್ರಮದಡಿಯಲ್ಲಿ ತಾಲೂಕಾ ಆರೋಗ್ಯಾಧಿಕಾರಿಗಳ ಕಚೇರಿಯ ಸಭಾಭವನದಲ್ಲಿ ರೋಟರಿ ಸಂಸ್ಥೆ ಗದಗ, ಜಿಲ್ಲಾ ಕ್ಷಯರೋಗ ನಿರ್ಮೂಲನಾ ಕೇಂದ್ರ ಗದಗ ಹಾಗೂ ತಾಲೂಕಾ ಆರೋಗ್ಯಾಧಿಕಾರಿಗಳ ಕಛೇರಿ ಗದಗ ಇವರುಗಳ ಸಂಯುಕ್ತಾಶ್ರಯದಲ್ಲಿ ಕ್ಷಯರೋಗಿಗಳಿಗೆ ಪೌಷ್ಠಿಕ ಆಹಾರ ಕಿಟ್‌ಗಳನ್ನು ವಿತರಿಸಲಾಯಿತು.



ಜಿಲ್ಲಾ ಕ್ಷಯರೋಗ ನಿರ್ಮೂಲನಾಧಿಕಾರಿ ಡಾ. ಅರುಂಧತಿ ಕುಲಕರ್ಣಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ, ನಮ್ಮ ಜಿಲ್ಲೆಯಲ್ಲಿ ಕಂಡುಬಂದ ಎಲ್ಲಾ ಕ್ಷಯರೋಗಿಗಳಿಗೆ ಚಿಕಿತ್ಸೆ ಪ್ರಾರಂಭದಿಂದ ಹಿಡಿದು ಚಿಕಿತ್ಸೆ ಪೂರ್ಣಗೊಳ್ಳುವವರೆಗೆ ಪ್ರತಿ ತಿಂಗಳು ಪೌಷ್ಠಿಕ ಆಹಾರ ಕಿಟ್‌ಗಳನ್ನು ಕೊಟ್ಟು ಕ್ಷಯಮಿತ್ರರನ್ನಾಗಿ ಮಾಡಿಕೊಂಡು ಕ್ಷಯಮುಕ್ತ ಜಿಲ್ಲೆಯನ್ನಾಗಿ ಮಾಡಲು ಸಹಕಾರ ಅತೀ ಮುಖ್ಯ ಎಂದರು.

ಕಾರ್ಯಕ್ರಮದಲ್ಲಿ ರೋಟರಿ ಸಂಸ್ಥೆಯ ಅಧ್ಯಕ್ಷ ಡಾ. ಆರ್.ಬಿ. ಉಪ್ಪಿನ ಉಪಸ್ಥಿತರಿದ್ದು ರಾಷ್ಟ್ರೀಯ ಆರೋಗ್ಯ ಕಾರ್ಯಕ್ರಮಗಳಲ್ಲಿ ಆರೋಗ್ಯ ದೃಷ್ಟಿಯಿಂದ ಜನಸೇವೆಗೆ ನಮ್ಮ ಸಂಸ್ಥೆಯು ಸದಾ ಸಿದ್ಧವಾಗಿರುತ್ತದೆ ಎಂದರು.

ಕಾರ್ಯಕ್ರಮದಲ್ಲಿ ರೋಟರಿ ಸಂಸ್ಥೆಯ ಮಾಜಿ ಅಧ್ಯಕ್ಷ ಶಿವಾಚಾರ್ಯ ಹೊಸಳ್ಳಿಮಠ, ಶ್ರೀಧರ ಸುಲ್ತಾನಪುರ, ಡಾ. ಸತೀಶ ಘಾಟಗೆ, ಡಾ. ಪ್ರೀತ ಕೋನಾ, ಅಶ್ವತ್ಥರೆಡ್ಡಿ ಎನ್.ಟಿ, ರೇಣುಕಾ ಪಿ ಸೇರಿದಂತೆ ಎಲ್ಲ ಎನ್‌ಟಿಇಪಿ ಸಿಬ್ಬಂದಿಯವರು ಉಪಸ್ಥಿತರಿದ್ದರು. ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಎಫ್.ಪಿ. ಮೋದಿನ್ನವರ ನಿರೂಪಿಸಿದರು.



ಗದಗ-ಬೆಟಗೇರಿಯ ಕರುಗಲ್ ಓಣಿಯಲ್ಲಿ ಪ್ರತಿ ವರ್ಷದಂತೆ ಈ ವರ್ಷವೂ ಸಹ ಹೋಳಿ ಹುಣ್ಣಿಮೆ ನಿಮಿತ್ತ ಕಾಮರತಿ ದೇವಿಯರನ್ನು ಪ್ರತಿಷ್ಠಾಪಿಸಲಾಯಿತು. ಈ ಸಂದರ್ಭದಲ್ಲಿ 24ನೇ ವಾರ್ಡಿನ ನಗರಸಭಾ ಸದಸ್ಯ ನಾಗರಾಜ ಹುಲಿಗೇಪ್ಪ ತಳವಾರ, ಶ್ರೀ ಸಾಯಿ ಸೇವಾ ಸಮಿತಿಯ ಅಧ್ಯಕ್ಷ ಸಂತೋಷ ಕಬಾಡರ, ಕರುಗಲ್ ಓಣಿಯ ಗುರು-ಹಿರಿಯರು ಯುವಕರು ಪಾಲ್ಗೊಂಡಿದ್ದರು.

# ರಕ್ತದಾನ ಶ್ರೇಷ್ಠವಾದ ದಾನ

■ವಿಜಯಸಾಕ್ಷಿ ಸುದ್ದಿ, ಮುಳಗುಂದ

ರಕ್ತದಾನವು ಶ್ರೇಷ್ಠವಾದ ದಾನವಾಗಿದೆ ಎಂದು ಕಾಲೇಜು ಉಪನ್ಯಾಸಕ, ರೆಡ್ ಕ್ರಾಸ್ ವಿಭಾಗದ ಸಂಯೋಜಕ ಬಸವರಾಜ ಹೂಗಾರ ಹೇಳಿದರು.

ಅವರು ಪಟ್ಟಣದ ಆರ್. ಎನ್. ದೇಶಪಾಂಡೆ ಸರಕಾರಿ ಪ್ರಥಮದರ್ಜೆ ಕಾಲೇಜಿನಲ್ಲಿ ಹಮ್ಮಿಕೊಂಡಿದ್ದ ರಕ್ತದಾನ ಶಿಬಿರ ಹಾಗೂ ಏಡ್ಸ್ ಜಾಗೃತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ರಕ್ತದಾನವು ಜೀವ ಉಳಿಸುವ ಮಹತ್ವದ ಕಾರ್ಯವಾಗಿದ್ದು, ಪ್ರತಿಯೊಬ್ಬರೂ ವರ್ಷಕ್ಕೊಮ್ಮೆಯಾದರೂ ರಕ್ತದಾನ




ಮಾಡುವುದರಿಂದ ಒಂದು ಜೀವ ಉಳಿಸುವುದರ ಜೊತೆಯಲ್ಲಿ ಉತ್ತಮ ಆರೋಗ್ಯ ಹೊಂದಲು ಸಹಕಾರಿಯಾಗುತ್ತದೆ ಎಂದರು.

ಪ್ರಾಂಶುಪಾಲಕರಾದ ಡಾ. ಆರ್. ಎಂ. ಕಲ್ಲನಗೌಡ್ರ, ಅನುಪಮಾ, ಡಾ. ಪರಸಪ್ಪ ಬಾರಕೇರ, ಚಂದ್ರಕಾಂತ ತೋಟಿ, ವಿನಾಯಕ ಶಿರಬಡಗಿ ಹಾಗೂ ಬೋಧಕ-ಬೋಧಕೇತರ ಸಿಬ್ಬಂದಿಗಳು ಇದ್ದರು.

# ವಿವಿಧ ಬೇಡಿಕೆಗೆ ಆಗ್ರಹಿಸಿ ಜಿಲ್ಲಾಧಿಕಾರಿಗೆ ಮನವಿ

■ವಿಜಯಸಾಕ್ಷಿ ಸುದ್ದಿ,ಗದಗ

ಇಲ್ಲಿನ ನಂದೀಶ್ವರ ನಗರದಲ್ಲಿ ಹಲವು ಬೇಡಿಕೆಗಳನ್ನು ಈಡೇರಿಸಬೇಕೆಂದು ಆಗ್ರಹಿಸಿ ಗದಗ ನಂದೀಶ್ವರ ನಗರದ 2 ಮತ್ತು 3ನೇ ಕ್ರಾಸ್ ನಿವಾಸಿಗಳ ಕ್ಷೇಮಾಭಿವೃದ್ಧಿ ಸಂಘ ಶನಿವಾರ ಗದಗ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿತು.

3ನೇ ಕ್ರಾಸ್‌ನ ರಸ್ತೆ ಹಾಳಾಗಿದ್ದು, ಸಂಚರಿಸಲು ಬಾರದಂತಾಗಿದೆ. ಈ ರಸ್ತೆಯನ್ನು ತ್ವರಿತವಾಗಿ ಸಿ.ಸಿ ರಸ್ತೆಯನ್ನಾಗಿ ಮಾಡಬೇಕು. ನಂದೀಶ್ವರ ನಗರಕ್ಕೆ ಸುಂದರವಾದ ಉದ್ಯಾನವ ನಿರ್ಮಾಣಕ್ಕೆ ಕ್ರಮ ಕೈಗೊಳ್ಳಬೇಕು. ಇಲ್ಲಿರುವ ಸಮಾಜ




ಕಲ್ಯಾಣ ಇಲಾಖೆಯ ಹಾಸ್ಟೆಲ್ ಚರಂಡಿ ನೀರು ರಸ್ತೆಯಲ್ಲೇ ಹರಿಯುವದರಿಂದ ಈ ಮಾರ್ಗದಲ್ಲಿ ಸಂಚರಿಸುವವರಿಗೆ ದುರ್ವಾಸನೆ ಬರುತ್ತಿದ್ದು, ನಿವಾರಣೆಗೆ ಸೂಕ್ತ ಕ್ರಮ ಕೈಗಳ್ಳಬೇಕು.

ಶಾಲೆ ಹಾಗೂ ದೇವಸ್ಥಾನ ಇರುವ ವಸತಿ ಪ್ರದೇಶದಲ್ಲಿ ಬಾರ್ ಆರಂಭವಾಗಿದ್ದು, ಇದನ್ನು ಬೇರೆಡೆ ಸ್ಥಳಾಂತರಿಸಲು ಅಗತ್ಯ ಕ್ರಮ ಜರುಗಿಸಬೇಕೆಂದು ಮನವಿ ಸಲ್ಲಿಸಿದರು. ಮನವಿ ಸ್ವೀಕರಿಸಿದ ಜಿಲ್ಲಾಧಿಕಾರಿಗಳು ಈ ಕುರಿತು ಸಂಬಂಧಿಸಿದವರಿಗೆ ಸೂಚನೆ ನೀಡಿ ತುರ್ತು ಕ್ರಮ ಜರುಗಿಸುವ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಸಂಘದ ಗೌರವಾಧ್ಯಕ್ಷ ಜಿ.ಎಸ್. ಹಿರೇಮಠ, ಅಧ್ಯಕ್ಷ ವಿಶ್ವನಾಥ ಗದ್ದಿಕೇರಿ, ಗೌರವ ಕಾರ್ಯದರ್ಶಿ ಬಿ.ಹೆಚ್. ಕೊರ್ಲಹಳ್ಳಿ, ಉಪಾಧ್ಯಕ್ಷ ಶಿವಾನಂದ ಪಲ್ಲೇದ, ಜೆ.ವ್ಹಿ. ಹಿರೇಮಠ, ಕೋಶಾಧ್ಯಕ್ಷ ಆರ್.ವ್ಹಿ. ಕರವೀರಮಠ, ಸಹ ಕಾರ್ಯದರ್ಶಿ ಕೆ.ವ್ಹಿ. ಯಾಳಗಿಶೆಟ್ರು, ಸಂಘಟನಾ ಕಾರ್ಯದರ್ಶಿ ಲಿಂಗರಾಜ ಗೊಲ್ಲರ, ಡಾ. ರವೀಂದ್ರ ನಂದಿ, ಕಾನೂನು ಸಲಹೆಗಾರರಾದ ಎಸ್.ಜಿ. ಪಲ್ಲೇದ, ವ್ಹಿ.ಎಸ್. ಶಿವಕಾಳಿಮಠ, ಮಂಜುನಾಥ ಗಜಕೋಶ, ಬಿ.ಬಿ. ಬಾವಿಕಟ್ಟಿ, ವ್ಹಿ.ವ್ಹಿ. ಮುನವಳ್ಳಿ, ಎಸ್.ಡಿ. ರಾಠೋಡ, ಶ್ರೀನಿವಾಸ ದಿವಗಿಹಳ್ಳಿ ಮುಂತಾದವರಿದ್ದರು.

## ನಿಧನ

### ಗುರುಪಾದಪ್ಪ ನಂಜಪ್ಪನವರ



ಡಂಬಳ: ಗ್ರಾಮದ ಲಿಂಗಾಯತ ಸಮಾಜದ ಹಿರಿಯರು, ಶಿಕ್ಷಣ ಸಂಸ್ಥೆಯ ರೂವಾರಿಗಳು, ನಿವೃತ್ತ ಶಿಕ್ಷಕರಾದ ಗುರುಪಾದಪ್ಪ ವೀ.ನಂಜಪ್ಪನವರ (90) ರವಿವಾರ ನಿಧನರಾಗಿದ್ದು, ಇಬ್ಬರು ಪುತ್ರರು, ಮೂವರು ಪುತ್ರಿಯರು, ಮೊಮ್ಮಕ್ಕಳು ಸೇರಿದಂತೆ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ. ಮೃತರ ಸ್ವ-ಇಚ್ಛೆಯಂತೆ ದೇಹವನ್ನು ಗದಗ ನಗರದ ವೈದ್ಯಕೀಯ ವಿಜ್ಞಾನ ಸಂಸ್ಥೆ (ಜಿಮ್ಸ್) ಕಾಲೇಜಿಗೆ ದೇಹದಾನ, ಬಾಗಲಕೋಟ ನಗರದ ಕುಮಾರೇಶ್ವರ ಆಸ್ಪತ್ರೆಗೆ ನೇತ್ರದಾನ ಮಾಡಲಾಗಿದೆ.

ಸಂತಾಪ: ವಿ.ಪ ಸದಸ್ಯರಾದ ಎಸ್.ವಿ. ಸಂಕನೂರ, ಮಾಜಿ ಸಚಿವ ಎಸ್.ಎಸ್. ಪಾಟೀಲ, ತೋಂಟದಾರ್ಯ ಮಠದ ಕಾರ್ಯದರ್ಶಿ ಎಸ್.ಎಸ್. ಪಟ್ಟಣಶೆಟ್ಟರ, ಜಿ.ಎಸ್. ಕೊರ್ಲಹಳ್ಳಿ, ಬಸುರಾಜ ಧಾರವಾಡ, ಸಿದ್ದಣ್ಣ ನಂಜಪ್ಪನವರ, ಎಮ್.ಎಸ್. ಯರಾಶಿ, ಕೆ.ಬಿ. ಕಂಬಳಿ, ಸಿ.ಟಿ. ಪ್ಯಾಟಿ, ಮಹೇಶ ಗಡಗಿ, ಗೌಸಿದ್ದಪ್ಪ ಬಿಸನಳ್ಳಿ, ಬಶೀರಹಮ್ಮದ ತಾಂಬೋಟಿ, ಶಂಕರಗೌಡ ಜಾಯನಗೌಡ, ಕೊಟ್ರೇಶ ಅಂಗಡಿ, ಆರ್.ಡಿ. ಹೊಂಬಳ, ರಫೀಕ ತಾಂಬೋಟಿ, ಕೆ.ಎಮ್. ಹೊಸಪೇಟಿ ಸೇರಿದಂತೆ ಗ್ರಾಮದ ಮತ್ತು ಸುತ್ತಮುತ್ತಲಿನ ಎಲ್ಲಾ ಸಮಾಜದ ಹಿರಿಯರು, ಶಿಕ್ಷಕ ವೃಂದ, ಅಪಾರ ಸಂಖ್ಯೆಯ ವಿದ್ಯಾರ್ಥಿಗಳು ಅಂತಿಮ ದರ್ಶನ ಪಡೆದು ಸಂತಾಪ ಸೂಚಿಸಿದರು.

### ಗದಗ 'ಸಖಿ ಸಹೇಲಿ' ಸಂಘಟನೆಯ ಪದಾಧಿಕಾರಿಗಳ ಪದಗ್ರಹಣ, ಮಹಿಳಾ ದಿನಾಚರಣೆ

# ಮಹಿಳೆಯ ಹಿನ್ನಡೆಗೆ ಮಹಿಳೆಯೇ ಕಾರಣ

■ವಿಜಯಸಾಕ್ಷಿ ಸುದ್ದಿ, ಗದಗ

ಜೀವನದಲ್ಲಿ ನೊಂದ, ತೇಜೋವಧೆಗೆ ಒಳಗಾದ ಮಹಿಳೆಗೆ ಅಭಯಹಸ್ತ ನೀಡಿ ಅವಳಲ್ಲಿ ಮನೋಸ್ಥೈರ್ಯ ತುಂಬುವುದೇ ನೀಜವಾದ ಮಹಿಳಾ ಸಬಲೀಕರಣವಾಗಿದೆ ಎಂದು ಮಹಿಳಾ ಧುರೀಣೆ, ಚಿಂತಕಿ ಸಂಯುಕ್ತಾ ಬಂಡಿ ಹೇಳಿದರು.

ಅವರು ನಗರದ ರೋಟರಿ ಐಕೇರ್ ಸೆಚಿಟರ್‌ನಲ್ಲಿ ಗದಗ ಸಖಿ ಸಹೇಲಿ ಮಹಿಳಾ ಸಂಘಟನೆಯ ನೂತನ ಪದಾಧಿಕಾರಿಗಳ ಪದಗ್ರಹಣ ಹಾಗೂ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಸಮಾರಂಭದಲ್ಲಿ ಪಾಲ್ಗೊಂಡು ಮಾತನಾಡುತ್ತಿದ್ದರು.

ಓರ್ವ ಮಹಿಳೆ ಜೀವನದಲ್ಲಿ ಮುನ್ನಡೆ ಸಾಧಿಸಿದ್ದಾಳೆ ಎಂದರೆ ಕೆಲವು ಮಹಿಳೆಯರು ಸಹಿಸಲಾರರು. ಆಕೆಯ ಬಗ್ಗೆ ತೇಜೋವಧೆಯ ಮಾತುಗಳನ್ನಾಗಿ ಆಕೆಯನ್ನು ಮಾನಸಿಕವಾಗಿ ಕುಗ್ಗಿಸುವದು ಸಲ್ಲದು. ಮಹಿಳೆಯ ಹಿನ್ನಡೆಗೆ ಮಹಿಳೆಯೇ ಕಾರಣವಾಗಬಾರದು. ಇಂತಹ ಕ್ಷುಲ್ಲಕ ವಿಚಾರಗಳು ಸೀತಾ ಮಾತೆಯನ್ನೂ ಬಿಟ್ಟಿಲ್ಲ, ಶರಣೆ, ಸಾಧಕ ಮಹಿಳೆಯರನ್ನೂ ಬಿಟ್ಟಿಲ್ಲ. ಇವುಗಳನ್ನೆಲ್ಲ ಮೆಟ್ಟಿ ನಿಂತ ದಿಟ್ಟ ಮಹಿಳೆ




ಕುಟುಂಬದಲ್ಲಿ, ಸಮಾಜದಲ್ಲಿ ಸಾಧಕ ಮಹಿಳೆ ಆಗಬಲ್ಲಳು ಎಂದರು.

ಸಖಿ ಸಹೇಲಿಯ ಪ್ರಮುಖರಾದ ಡಾ. ನಯನಾ ಭಸ್ಮೆ ನೂತನ ಪದಾಧಿಕಾರಿಗಳಿಗೆ ಅಧಿಕಾರ ಹಸ್ತಾಂತರಿಸಿ ಮಾತನಾಡಿ, ರೋಟರಿ ಕ್ಲಬ್ ಮಾದರಿಯಲ್ಲಿಯೇ ಈ ಸಂಘಟನೆ ಕಾರ್ಯ ನಿರ್ವಹಿಸಲಿದ್ದು, ಸಮಾಜಮುಖಿ ಕಾರ್ಯ ಮಾಡುವ ಮೂಲಕ ಮಹಿಳಾ ಸಂಘಟನೆ, ಮಹಿಳಾ ಸಬಲೀಕರಣದ ಉದ್ದೇಶಗಳನ್ನು ಹೊಂದಿದೆ ಎಂದರು.

ಸಖಿ ಸಹೇಲಿಯ ಪ್ರಮುಖರಾದ ಜ್ಯೋತಿ ವೆಂಕಟೇಶ, ತಾರಾದೇವಿ ವಾಲಿ ಮತ್ತು ಸುನೀತಾ ಸಿಂತ್ರಿ ಮಾತನಾಡಿದರು. ನಿಕಟಪೂರ್ವ ಅಧ್ಯಕ್ಷೆ ಜ್ಯೋತಿ ಭರಮಗೌಡ್ರ ತಮ್ಮ ಅಧಿಕಾರದ ಅವಧಿಯಲ್ಲಿ ಮಾಡಿದ ಕಾರ್ಯಗಳು ತಮಗೆ ತೃಪ್ತಿ ತಂದಿವೆ ಎಂದರು. ನೂತನ ಅಧ್ಯಕ್ಷೆ ಸುಮಾ ಪಾಟೀಲ ತಮ್ಮ ಅಧಿಕಾರದ ಅವಧಿಯಲ್ಲಿ ಹಮ್ಮಿಕೊಳ್ಳಲಿರುವ ಕಾರ್ಯ ಯೋಜನೆಗಳನ್ನು ವಿವರಿಸಿ ಸರ್ವರ ಸಹಕಾರ ಕೋರಿದರು.

> ಮುಖ್ಯ ಅತಿಥಿ ಅತಿಥಿ ಕವಿತಾ ದಂಡಿನ ಮಾತನಾಡಿ, ಮಹಿಳೆಯರು ಸಮಾಜ ಗುರುತಿಸುವ, ಗೌರವಿಸುವ ಕಾರ್ಯ ಮಾಡಬೇಕು. ಯೋಜನೆ ಮತ್ತು ಗುರಿ ಸ್ಪಷ್ಟವಾಗಿದ್ದಲ್ಲಿ ದಿಟ್ಟ ಹೆಜ್ಜೆಯನ್ನಿಟ್ಟು ಮುನ್ನಡೆಯಿರಿ. ಸಖಿ ಸಹೇಲಿ ಮಹಿಳಾ ಸಂಘಟನೆ ಗದಗ ಪರಿಸರದಲ್ಲಿ ಹೊಸ ಛಾಪು ಮೂಡಿಸಲಿ, ನೂತನ ಪದಾಧಿಕಾರಿಗಳು ದಿಟ್ಟತನದಿಂದ ಕಾರ್ಯ ಮಾಡಿ ಮಹಿಳೆಯರಿಗೆ ಧ್ವನಿಯಾಗಲಿ ಎಂದು ಹಾರೈಸಿದರು.

ಜ್ಯೋತಿ ಭರಮಗೌಡರ ಸ್ವಾಗತಿಸಿದರು, ನಿರ್ಮಲಾ ಪಾಟೀಲ ಹಾಗೂ ವಿದ್ಯಾ ಶಿವನಗುತ್ತಿ ಪರಿಚಯಿಸಿದರು. ಕಾವ್ಯಾ ದಂಡಿನ ನಿರೂಪಿಸಿದರೆ, ಪ್ರಿಯಾಂಕಾ ಹಳ್ಳಿ ವಂದಿಸಿದರು.

ಅಶ್ವಿನಿ ಮಾದಗುಂಡಿ, ಸಾಗರಿಕಾ ಅಕ್ಕಿ, ಶ್ರೀದೇವಿ ಮಹೇಂದ್ರಕರ, ಅನುರಾಧಾ ಬಸವಾ, ಸವಿತಾ ಭರಮಗೌಡರ, ಅನುರಾಧಾ ಅಮಾತಿಗೌಡರ, ಮಂಜುಳಾ ಹಪಗತ್ತಿ, ಚಂದ್ರಕಲಾ ಸ್ಥಾವರಮಠ, ಸುಗ್ಗಲಾ ಯಳಮಲಿ, ಮಧು ಕರಬಿಷ್ಠಿ, ಜಯಶ್ರೀ ಉಗಲಾಟದ, ಸುವರ್ಣಾ ಮದರಿಮಠ, ಜ್ಯೋತಿ ದಾನಪ್ಪಗೌಡರ ಮುಂತಾದವರು ಪಾಲ್ಗೊಂಡಿದ್ದರು.

## ಜಿಲ್ಲಾ ಘಟಕದ ನಿರ್ದೇಶಕರಾಗಿ ಆಯ್ಕೆ



■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಗದಗ ಜಿಲ್ಲಾ ಘಟಕದ ನಿರ್ದೇಶಕರಾಗಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಗದಗ ತಾಲೂಕಿನ ವಿಸ್ತರಣಾಧಿಕಾರಿ ಶರಣಪ್ಪ ಗರೇಬಾಳ ಆಯ್ಕೆಯಾಗಿದ್ದಾರೆ.

ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಯಾದ ಅಮಿತ್ ಬಿದರಿ ಆರ್, ಪ್ರಾಂಶುಪಾಲರಾದ ಮಂಜುಳಾ ಆರಿಕಟ್ಟಿ, ಕಾಶೀನಾಥ್ ಕೆ, ಅಶೋಕ ಲಮಾಣಿ, ಉಪನ್ಯಾಸಕರಾದ ಬಸವರಾಜ ಮಾನೋಟಗಿ, ಮುಖ್ಯೋಪಾಧ್ಯಾಯರಾದ ದೊಡ್ಡಪ್ಪ ವಾಲ್ಮೀಕಿ, ವಿಜಯಲಕ್ಷ್ಮೀ, ದೀಪಾ ಹೂಗಾರ್, ಸಾಹಿದ್ ಲೋಹಾರ್, ಪ್ರಮೋದ್ ಪಾಟೀಲ್, ಸವಿತಾ ಸಾಸ್ವಿಹಳ್ಳಿ, ಶಿವಾನಂದ ಲಮಾಣಿ ಸೇರಿದಂತೆ ಎಲ್ಲಾ ನಿಲಯ ಪಾಲಕರು, ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ವರ್ಗ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ನೌಕರ ಬಳಗ ಮತ್ತು ವಿದ್ಯಾರ್ಥಿಗಳು ಹರ್ಷ ವ್ಯಕ್ತಪಡಿಸಿ ಶುಭಕೋರಿದ್ದಾರೆ.

### ಶಿವಾನುಭವ ಕಾರ್ಯಕ್ರಮದಲ್ಲಿ ಡಾ. ತೋಂಟದ ಸಿದ್ದರಾಮ ಮಹಾಸ್ವಾಮಿಗಳ ಅಭಿಮತ

# ಮಕ್ಕಳಿಗೆ ತಾಯಿಯ ಅನುಕರಣೆಯೇ ಸಂಸ್ಕಾರ

■ ವಿಜಯಸಾಕ್ಷಿ ಸುದ್ದಿ, ಗದಗ

ತಂದೆ, ಮಕ್ಕಳು, ಪರಿವಾರವನ್ನು ತನ್ನ ತಾಳ್ಮೆಯಿಂದಲೇ ನೋಡಿಕೊಂಡು ಸಂಸ್ಕಾರವನ್ನು ನೀಡುವ ಮಹಾಶಕ್ತಿ ಮಹಿಳೆ. 'ಮಹಿ' ಎಂದರೆ ಭೂಮಿ. 'ಇಳೆ' ಎಂದರೂ ಭೂಮಿ. ಅಂತೆಯೇ ಮಹಿಳೆ ಭೂಮಿ ತೂಕದವಳು. ಮಕ್ಕಳಿಗೆ ಅವಳ ಅನುಕರಣೆಯೇ ಸಂಸ್ಕಾರ ಎಂದು ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಹೇಳಿದರು.

ಲಿಂಗಾಯತ ಪ್ರಗತಿಶೀಲ ಸಂಘದ 2736ನೇ ಶಿವಾನುಭವದ ಸಾನ್ನಿಧ್ಯ ವಹಿಸಿ ಮಾತನಾಡಿದ ಶ್ರೀಗಳು, ತಾಯಿಯಾದವಳು ಮಕ್ಕಳಿಗೆ ಸಂಸ್ಕಾರದ ಪ್ರತಿಬಿಂಬ, ಆದರ್ಶ ಮತ್ತು ಧೈರ್ಯ. ಬಸವಾದಿ ಶಿವಶರಣರು ಜಾತಿ-ಮತ-ಪಂಥ ಬೇಧಭಾವ ಅಳಿಸಿ ಸಮಾನತೆಯ ಭಾವವನ್ನು ಬಿತ್ತಿದರು. ಪುರುಷ ಪ್ರಧಾನ ಎಂಬುದು ಬದಲಾವಣೆಯಾಗಿದೆ. ಪ್ರತಿಯೊಂದು ಕ್ಷೇತ್ರಗಳಲ್ಲಿಯೂ ಮಹಿಳೆಯರು ಮುಂಚೂಣಿಯಲ್ಲಿದ್ದಾರೆ. ಸುನೀತಾ ವಿಲಿಯಮ್ಸ್ ಅಂತರಿಕ್ಷದಲ್ಲಿ ಸಾಧನೆ ಮಾಡಿದ್ದಾರೆ. ಇಂತಹ ಅನೇಕ ಮಹಿಳಾ ಸಾಧಕಿಯರು ಬೆಳಗಿದ್ದಾರೆ. ಪುರುಷರಿಗೆ ಸಮಾನವಾಗಿ ಇಂದು ಮಹಿಳೆಯರು ಬೆಳೆದು ನಿಂತಿರುವುದು ಸಂತೋಷದ ವಿಷಯ ಎಂದರು.

ಬಾಗಲಕೋಟೆಯ ಸರ್ಕಾರಿ ಪ್ರಥಮದರ್ಜೆ ಕಾಲೇಜಿನ ಸಹಾಯಕ ಪ್ರಾಧ್ಯಾಪಕರಾದ ಡಾ. ಸುಮಂಗಲಾ ಮೇಟಿ



ಉಪನ್ಯಾಸ ನೀಡಿ, ಮಹಿಳೆ ಮನಸ್ಸು ಮಾಡಿದರೆ ಜಗತ್ತನ್ನೇ ಬದಲಾವಣೆ ಮಾಡುವ ಶಕ್ತಿಯಿದೆ. ಮೌಲ್ಯಗಳ ಪಾಠವನ್ನು ಮನೆಯಲ್ಲಿಯೇ ಹೇಳಿಕೊಡಬೇಕು. ಎಷ್ಟೋ ಯುವ ಜನಾಂಗದಲ್ಲಿ ಮತ್ತು ವಿದ್ಯಾರ್ಥಿಗಳಲ್ಲಿ ಮೌಲ್ಯಗಳನ್ನು ಬಿತ್ತುವುದು ಅವಶ್ಯವಾಗಿದೆ. ಸಂಸ್ಕೃತಿಯ ಮೂಲಕ ಉತ್ತಮ ಸಮಾಜವನ್ನು ನಿರ್ಮಿಸಬೇಕಾಗಿದೆ ಎಂದರು.

ಗದಗ ಜಿಲ್ಲಾ ಕದಳಿ ಮಹಿಳಾ ವೇದಿಕೆಯ ಅಧ್ಯಕ್ಷರಾದ ಸುಧಾ ಹುಚ್ಚಣ್ಣನವರ ಹಾಗೂ ಗದಗ ಜಿಲ್ಲೆಯ ಏಳು ತಾಲೂಕುಗಳ ಕದಳಿ ಮಹಿಳಾ ವೇದಿಕೆಯ ಅಧ್ಯಕ್ಷರು, ಕಾರ್ಯದರ್ಶಿಗಳು ಮತ್ತು ಪದಾಧಿಕಾರಿಗಳು ಉಪಸ್ಥಿತರಿದ್ದರು.

ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಅಂಗವಾಗಿ ಸಾರಿಗೆ ಕ್ಷೇತ್ರದಲ್ಲಿ ವಿಶಿಷ್ಟ ಸಾಧನೆ ಮಾಡುತ್ತಿರುವ ವಾ.ಕ.ರ.ಸಾ ಸಂಸ್ಥೆಯ ಬಸ್ ಚಾಲಕರಾಗಿ ಕರ್ತವ್ಯ ನಿರ್ವಹಿಸುತ್ತಿರುವ ಶ್ರೀದೇವಿ ಕೇಸರಪ್ಪನವರ ಹಾಗೂ ಆಟೋ ಚಾಲಕಿ ರೇಖಾ ಸಂತೋಷ ಹುಲ್ಲೂರು ಇವರನ್ನು ಸನ್ಮಾನಿಸಲಾಯಿತು. ಪಂಚಾಕ್ಷರಿ ಗವಾಯಿಗಳ ಸಂಗೀತ ಮಹಾವಿದ್ಯಾಲಯದ ವಿದ್ಯಾರ್ಥಿಗಳಿಂದ ಸಂಗೀತ ಕಾರ್ಯಕ್ರಮ ನಡೆಯಿತು. ಮೃತ್ಯುಂಜಯ ಹಿರೇಮಠ ಹಾಗೂ ಗುರುನಾಥ್ ಸುತಾರ ವಚನ ಸಂಗೀತ ನಡೆಸಿದರು. ಧರ್ಮಗ್ರಂಥ ಪಠಣವನ್ನು ಸಾಕ್ಷಿ ಜೋಗಿನ, ವಚನ ಚಿಂತನವನ್ನು ವೀಣಾ ತುಪ್ಪದ ನಡೆಸಿಕೊಟ್ಟರು. ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷ ಬಾಲಚಂದ್ರ ಭರಮಗೌಡ್ರ, ಉಪಾಧ್ಯಕ್ಷ ಡಾ. ಉಮೇಶ್ ಪುರದ, ವಿದ್ಯಾ ಪ್ರಭು ಗಂಜಿಹಾಳ, ಕಾರ್ಯದರ್ಶಿ ವೀರಣ್ಣ ಗೋಟಡಕಿ, ಸಹ ಕಾರ್ಯದರ್ಶಿ ಸೋಮನಾಥ ಪುರಾಣಿಕ, ನಾಗರಾಜ್ ಹಿರೇಮಠ, ಸಹಕಾರ್ಯದರ್ಶಿ ಮಹೇಶ್ ಗಾಣಿಗೇರ, ಕೋಶಾಧ್ಯಕ್ಷ ಬಸವರಾಜ ಕಾಡಪ್ಪನವರ, ಶಿವಾನುಭವ ಸಮಿತಿಯ ಚೇರಮನ್ ಐ.ಬಿ. ಬೆನಕೊಪ್ಪ, ಸಹ ಚೇರಮನ್ ಶಿವಾನಂದ ಹೊಂಬಳ ಹಾಗೂ ಭಕ್ತರು ಉಪಸ್ಥಿತರಿದ್ದರು. ದಾಸೋಹ ಸೇವೆಯನ್ನು ಗದಗ ಜಿಲ್ಲೆಯ ಕದಳಿ ಮಹಿಳಾ ವೇದಿಕೆಯ ಜಿಲ್ಲಾಧ್ಯಕ್ಷರು ಹಾಗೂ ಜಿಲ್ಲೆಯ ಎಲ್ಲಾ ಪದಾಧಿಕಾರಿಗಳು ವಹಿಸಿಕೊಂಡಿದ್ದರು. ಸುಧಾ ಹುಚ್ಚಣ್ಣನವರ ಸ್ವಾಗತಿಸಿದರು. ವಿದ್ಯಾ ಪ್ರಭು ಗಂಜಿಹಾಳ ಕಾರ್ಯಕ್ರಮ ನಿರೂಪಿಸಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ ಅಧ್ಯಾತ್ಮ ವಿದ್ಯಾಶ್ರಮದ ಶರಣೆ ಮೈತ್ರಾದೇವಿ ಅಮ್ಮನವರು ಮಾತನಾಡಿ, ಒಡಹುಟ್ಟಿದ ಅಕ್ಕನಿಗಾಗಿ ಕ್ರಾಂತಿ ಮಾಡಿದ ಬಸವಣ್ಣನವರು ಮಹಿಳೆಯರಿಗೆ ಅವಕಾಶ ಮಾಡಿಕೊಟ್ಟಿದ್ದಕ್ಕೆ ಇಂದು ಎಲ್ಲಾ ರಂಗಗಳಲ್ಲಿ ಮಹಿಳೆಯರು ಸಮಾನವಾದ ಅವಕಾಶವನ್ನು ಪಡೆಯಲು ಸಾಧ್ಯವಾಗಿದೆ. ಭಾರತ ನಾಗರಿಕತೆಯ ತೊಟ್ಟಿಲು, ಸಂಸ್ಕೃತಿಯ ಪರಂಪರೆ. ಮಹಿಳೆಯರು ಗಟ್ಟಿಯಾಗಿದ್ದರಿಂದ ಸಂಸ್ಕೃತಿ-ಪರಂಪರೆ ಮುಂದುವರೆದುಕೊಂಡು ಬಂದಿದೆ. ತಾಯಿಯಾದವರು ಮಕ್ಕಳು ಎದ್ದ ಕೂಡಲೆ ಬೆಡ್ ಟೀ ಕೊಡದೆ, ಮುಖ ತೊಳೆ, ವಿಭೂತಿ ಹಚ್ಚು, ಒಂದು ವಚನ ಹೇಳು, ನಂತರ ನಿನಗೆ ಬೆಡ್ ಟೀ ಕೊಡುವೆ ಎಂದರೆ ಅದೇ ಬಹುದೊಡ್ಡ ಸಂಸ್ಕೃತಿ ಎಂದರು.

# 12 ಲಕ್ಷ ರೂ ಉಳಿತಾಯ ಬಜೆಟ್ ಮಂಡನೆ

■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಶನಿವಾರ ಶಿರಹಟ್ಟಿಯ ಪಟ್ಟಣ ಪಂಚಾಯಿತಿಯ 2025-26ನೇ ಸಾಲಿನ ಎಲ್ಲ ಮೂಲಗಳಿಂದ 708.60 ಲಕ್ಷ ಮತ್ತು ಎಲ್ಲ ಮೂಲಗಳಿಂದ ನಿರೀಕ್ಷಿಸಿದ ಮೊತ್ತ 720.80 ಲಕ್ಷದಂತೆ 12.20ಲಕ್ಷ ಉಳಿತಾಯ ಬಜೆಟ್ ಮಂಡನೆ ಮಾಡಲಾಯಿತು.

ಬಜೆಟ್ ಮಂಡನೆ ನಂತರ ಮಾತನಾಡಿದ ಅಧ್ಯಕ್ಷೆ ದೇವಕ್ಕ ಗುಡಿಮನಿ, ಶಿರಹಟ್ಟಿ ಪ.ಪಂ 2024ರ ಅಂತ್ಯಕ್ಕೆ ಟ್ರೇಡ್ ಲೈಸನ್ಸ್‌ನಲ್ಲಿ ಶೇ. 100 ಪ್ರಗತಿ ಸಾಧಿಸಿದೆ. ಸಾರ್ವಜನಿಕರು, ಪಂಚಾಯಿತಿಯ ಅಧಿಕಾರಿ-ಸಿಬ್ಬಂದಿಗಳ ಹಾಗೂ ಪೌರಕಾರ್ಮಿಕರ ಸಹಕಾರದಿಂದ ಪಟ್ಟಣವನ್ನು ಮುನ್ನಡೆಸಲಾಗುತ್ತಿದೆ.



ಪ್ರಾರಂಭ ಶುಲ್ಕ 6 ಕೋಟಿ 62ಲಕ್ಷ 67 ಸಾವಿರ ಇದ್ದು, ಎಲ್ಲಾ ಮೂಲಗಳಾದ ರಾಜಸ್ವ ಬಂಡವಾಳ ಹಾಗೂ ಅಸಾಧಾರಣ ಆದಾಯಗಳಿಂದ ನಿರೀಕ್ಷಿಸಿದ ಮೊತ್ತ 7 ಕೋಟಿ 20ಲಕ್ಷ 80 ಸಾವಿರ, ಎಲ್ಲಾ ಮೂಲಗಳಾದ ರಾಜಸ್ವ ಬಂಡವಾಳ ಹಾಗೂ ಅಸಾಧಾರಣ ವೆಚ್ಚಗಳಿಂದ ನಿರೀಕ್ಷಿಸಿದ ಮೊತ್ತ 7 ಕೋಟಿ 8 ಲಕ್ಷ 60 ಸಾವಿರ ಇದ್ದು, 12 ಲಕ್ಷ 20 ಸಾವಿರ ಳಿತಾಯ ಬಜೆಟ್ ಇದಾಗಿದೆ.

ಶಿರಹಟ್ಟಿ ಪಟ್ಟಣಕ್ಕೆ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಹೆಚ್ಚಿನ ಪ್ರಾಧಾನ್ಯತೆ ನೀಡಿ ಸಂಪನ್ಮೂಲಗಳ ಕ್ರೋಢೀಕರಣಕ್ಕೆ ಕಟ್ಟುನಿಟ್ಟಿನ ಕ್ರಮಗಳನ್ನು ಅಳವಡಿಸಿಕೊಂಡು ಹೆಚ್ಚು ಬಂಡವಾಳ ಆಸ್ತಿಗಳನ್ನು ಸೃಜಿಸುವುದೇ ಪಟ್ಟಣ ಪಂಚಾಯಿತಿಯ ಗುರಿಯಾಗಿದೆ. ನಮ್ಮ ಪಟ್ಟಣವನ್ನು ಸ್ವಚ್ಛ ಹಾಗೂ ಸುಂದರ ತಾಣವನ್ನಾಗಿಸಲು ಆಯ-ವ್ಯಯದಲ್ಲಿ ಪ್ರಾತಿನಿಧ್ಯತೆಯನ್ನು ನೀಡಲಾಗಿದೆ ಎಂದರು.

ಮುಖ್ಯಾಧಿಕಾರಿ ಶಂಕರ ಹುಲ್ಲಮ್ಮನವರ ಪ್ರಾಸ್ತಾವಿಕವಾಗಿ ಮಾತನಾಡಿದರು.

ಉಪಾಧ್ಯಕ್ಷೆ ನೀಲಮ್ಮ ಹುಬ್ಬಳ್ಳಿ, ಸ್ಥಾಯಿ ಸಮಿತಿ ಅಧ್ಯಕ್ಷ ಹೊನ್ನಪ್ಪ ಶಿರಹಟ್ಟಿ, ಸದಸ್ಯರಾದ ಪರಮೇಶ ಪರಬ, ಅಶರತ್‌ಅಲಿ ಢಾಲಾಯತ, ಶಿವರಾಜ ಕಪ್ಪತ್ತನವರ, ಇಂಜಿನಿಯರ್ ಕಾಟೇವಾಲಿ ಮುಂತಾದವರು ಉಪಸ್ಥಿತರಿದ್ದರು.

## ಸೋಲಾರ್ ಇಲೆಕ್ಟ್ರಿಕ್ ಬೋಟಿಂಗ್ ವ್ಯವಸ್ಥೆಗೆ ಚಾಲನೆ

■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಭೀಷ್ಮ ವಿಹಾರಧಾಮದಲ್ಲಿ ಪ್ರವಾಸಿಗ್ಗರ ಅನುಕೂಲಕ್ಕಾಗಿ ನೂತನವಾಗಿ ಪ್ರಾರಂಭಿಸಲಾದ ಸೋಲಾರ ಇಲೆಕ್ಟ್ರಿಕ್ ಬೋಟಿಂಗ್ ವ್ಯವಸ್ಥೆಗೆ ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್.ಕೆ. ಪಾಟೀಲ ಶನಿವಾರ ಚಾಲನೆ ನೀಡಿ ಸೋಲಾರ್ ಇಲೆಕ್ಟ್ರಿಕಲ್ ಬೋಟ್‌ನಲ್ಲಿ ಭೀಷ್ಮ ಕೆರೆಯ ವಿಹಾರ ನಡೆಸಿದರು.

ನಂತರ ಮಾತಾನಾಡಿದ ಸಚಿವರು, ರಾಜ್ಯದಲ್ಲಿಯೇ ಮೊದಲ ಸೋಲಾರ್ ಇಲೆಕ್ಟ್ರಿಕ್ ಬೋಟಿಂಗ್ ವ್ಯವಸ್ಥೆಯನ್ನು ಗದುಗಿನ ಭೀಷ್ಮ ವಿಹಾರ ಧಾಮದಲ್ಲಿ



ಪ್ರಾರಂಭಿಸಿರುವದು ಹೆಮ್ಮೆಯ ಸಂಗತಿಯಾಗಿದೆ ಎಂದು ಸಂತಸ ವ್ಯಕ್ತ ಪಡಿಸಿದರು.

ಸದ್ಯ ಪ್ರವಾಸಿಗರ ಅನುಕೂಲಕ್ಕಾಗಿ ಸೋಲಾರ್ ಇಲೆಕ್ಟ್ರಿಕ್ ಬೋಟ್ ಕಾರ್ಯನಿರ್ವಹಿಸತ್ತಿದ್ದು, ಸಧ್ಯದಲ್ಲೇ ಮತ್ತೆರಡು ಸೋಲಾರ್ ಬೋಟ್‌ಗಳು ಆಗಮಿಸಲಿವೆ ಎಂದು ಸಚಿವ ಎಚ್.ಕೆ. ಪಾಟೀಲ ತಿಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ, ನಗರಸಭೆ ಸದಸ್ಯರು, ನಗರಸಭೆ ಆಯುಕ್ತರಾದ ರಾಜಾರಾಂ ಪವಾರ, ಪ್ರವಾಸೋದ್ಯಮ ಇಲಾಖೆಯ ಸಹಾಯುಕ ನಿರ್ದೇಶಕ ಕೊಟ್ರೇಶ್ವರ ವಿಭೂತಿ, ಉಪ ಅರಣ್ಯ ಸಂರಕ್ಷಣಾಧಿಕಾರಿ ಸಂತೋಷ ಕೆಂಚೆಪ್ಪನವರ ಸ್ಥೆರಿದಂತೆ ಗಣ್ಯರು, ಸಾರ್ವಜನಿಕರು ಉಪಸ್ಥಿತರಿದ್ದರು.

### ಜ. ಅನ್ನದಾನೀಶ್ವರ ಅಕ್ಕನ ಬಳಗದಿಂದ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ


# ಮಹಿಳೆಯರ ಮೇಲಿನ ದೌರ್ಜನ್ಯ ವಿಷಾದನೀಯ

■ ವಿಜಯಸಾಕ್ಷಿ ಸುದ್ದಿ, ಮುಂಡರಗಿ

ಭಾರತವು ಮಹಿಳೆಯರಿಗೆ ವಿಶೇಷ ಸ್ಥಾನಮಾನ ಕಲ್ಪಿಸಿದ್ದು, ಮಾತೃದೇವೋ ಭವ ಎನ್ನುವ ಪೂಜ್ಯನೀಯ ಭಾವವನ್ನ ಸಮರ್ಪಿಸಿದೆ. ಆದರೂ ಸಹ ಮಾನವನ ಅತ್ಯಾಸೆಯಿಂದ ಅಲ್ಲಲ್ಲಿ ಮಹಿಳೆಯ ಮೇಲೆ ದೌರ್ಜನ್ಯಗಳು ನಡೆಯುತ್ತಿರುವದು ವಿಷಾದನೀಯ ಎಂದು ಮುಂಡರಗಿ ಸಂಸ್ಥಾನಮಠದ ಶ್ರೀ ಜಗದ್ಗುರು ನಾಡೋಜ ಡಾ. ಅನ್ನದಾನೀಶ್ವರ ಮಹಾಸ್ವಾಮಿಜಿ ಹೇಳಿದರು.

ಪಟ್ಟಣದ ಜಗದ್ಗುರು ಅನ್ನದಾನೀಶ್ವರ ಕಲ್ಯಾಣ ಮಂಟಪದಲ್ಲಿ ಜ. ಅನ್ನದಾನೀಶ್ವರ ಅಕ್ಕನ ಬಳಗದಿಂದ ಜರುಗಿದ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮದ ದಿವ್ಯ ಸಾನ್ನಿಧ್ಯ ವಹಿಸಿ ಪೂಜ್ಯರು ಆಶೀರ್ವಚನ ನೀಡುತ್ತಿದ್ದರು.

ಮಹಿಳೆಯರು ಧಾರ್ಮಿಕ ಆಚರಣೆಗಳಲ್ಲಿ ತೊಡಗಬೇಕು. ಅಂದಾಗ ಕುಟುಂಬದಲ್ಲಿರುವ ಸದಸ್ಯರಿಗೆ ಹಾಗೂ ಮಕ್ಕಳಿಗೂ ಸಹ ಒಳ್ಳೆಯ ಸಂಸ್ಕಾರಕ್ಕೆ ದಾರಿ ಮಾಡಿಕೊಡುತ್ತದೆ. ಅಲ್ಲದೇ ಉದ್ಯೋಗದ ಕಡೆಯೂ ಮಹಿಳೆ ಗಮನ ಹರಿಸಬೇಕಾಗಿದ್ದು, ಕುಟುಂಬಕ್ಕೆ



ನೆರವಾಗುವ ಮೂಲಕ ತನ್ನ ಸ್ವಾಭಿಮಾನದ ಬದುಕನ್ನು ಕಟ್ಟಿಕೊಳ್ಳುವಲ್ಲಿ ಶ್ರಮಿಸಬೇಕು ಎಂದು ಹೇಳಿದರು.

ಕನ್ನಿಕಾ ಪರಮೇಶ್ವರಿ ಮಹಿಳಾ ಮಂಡಳ ಅಧ್ಯಕ್ಷೆ ಸ್ವಾತಿ ಅಳವಂಡಿ ಮಾತನಾಡಿ, ಮಹಿಳೆಯರ ಮೇಲೆ ಆಗುತ್ತಿರುವ ದೌರ್ಜನ್ಯ ಮತ್ತು ಅನ್ಯಾಯಗಳ ವಿರುದ್ಧ ಮಹಿಳಾ ಸಂಘಟನೆಗಳು ಧ್ವನಿ ಎತ್ತಬೇಕು ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಅನ್ನದಾನೀಶ್ವರ ಅಕ್ಕನ ಬಳಗದ ಅಧ್ಯಕ್ಷರಾದ ಲಕ್ಷ್ಮೀದೇವಿ ಬೆಳವಟಗಿಮಠ ವಹಿಸಿದ್ದರು. ವೇ. ಚೆನ್ನವೀರಯ್ಯಸ್ವಾಮಿ ಹಿರೇಮಠ ಉಪಸ್ಥಿತರಿದ್ದರು. ಇದೇ ವೇಳೆ ಅಕ್ಕನ ಬಳಗದ ಸದಸ್ಯರು ಪ್ರದರ್ಶಿಸಿದ ಹೇಮರೆಡ್ಡಿ ಮಲ್ಲಮ್ಮಳ ರೂಪಕ ಪ್ರದರ್ಶನ ಎಲ್ಲರನ್ನೂ ಆಕರ್ಷಿಸಿತು. ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದವರಿಗೆ ಬಹುಮಾನ ವಿತರಿಸಲಾಯಿತು. ಮಹಿಳಾ ಸದಸ್ಯರಿಂದ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು.

ಅಕ್ಕನ ಬಳಗದ ಸದಸ್ಯರು ಪ್ರಾರ್ಥಿಸಿದರು. ಜ್ಯೋತಿ ಜೋಷಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಸರಸ್ವತಿ ಎನ್‌ಎಚ್‌ಎಂ ಅಕ್ಕನ ಬಳಗ ನಡೆದು ಬಂದ ಕುರಿತು ವರದಿ ವಾಚನಗೈದರು. ಶಕುಂತಲಾ ಹಂಪಿಮಠ ಹಾಗೂ ಶ್ವೇತಾ ಹಿರೇಮಠ ಕಾರ್ಯಕ್ರಮ ನಿರೂಪಿಸಿದರೆ, ಸಂಗೀತಾ ಕೊರಡಕೇರಿ ವಂದಿಸಿದರು. ಅನ್ನದಾನೀಶ್ವರ ಅಕ್ಕನ ಬಳಗ, ಕನ್ನಿಕಾ ಪರಮೇಶ್ವರಿ ಮಹಿಳಾ ಮಂಡಳ ಹಾಗೂ ಹೊಳಲು ವಿರಕ್ತಮಠದ ಅಕ್ಕನ ಬಳಗದ ಸಸ್ಯರು ಪಾಲ್ಗೊಂಡಿದ್ದರು.

ಹೊಳಲು ವಿರಕ್ತಮಠದ ಅಕ್ಕನಬಳಗದ ಅಧ್ಯಕ್ಷರಾದ ಶಾರದಾ ವೆಂಕಟಾಪುರ ಮಾತನಾಡಿ, ಲಿಂಗ ತಾರತಮ್ಯತೆಯನ್ನ ಹೋಗಲಾಡಿಸಿ, ಸಮಾನತೆಯ ಸಂದೇಶ ಸಾರಿಸವರು ಸಾವಿತ್ರಿಭಾಯಿ ಫುಲೆ ಅವರು. ಭಾರತದ ಮೊದಲ ಮಹಿಳಾ ಶಿಕ್ಷಕಿಯಾಗುವ ಮೂಲಕ ಪಿತೃಪ್ರಭುತ್ವವನ್ನು ಸೋಲಿಸಿ, ಮಹಿಳಾ ಶಿಕ್ಷಣ ಮತ್ತು ಸಾಮಾಜಿಕ ಸುಧಾರಣೆಯಲ್ಲಿ ಕ್ರಾಂತಿಕಾರಿ ಹೆಜ್ಜೆ ಇಟ್ಟು ಇಂದು ನಮಗೆಲ್ಲ ಆದರ್ಶರಾಗಿದ್ದಾರೆ ಎಂದರು.

## ಡಾ.ಪಂಚಾಕ್ಷರಿ ಹಿರೇಮಠರ ಅಗಲಿಕೆಗೆ ಶ್ರೀ ರಂಭಾಪುರಿ ಜಗದ್ಗುರುಗಳ ಸಂತಾಪ

■ ವಿಜಯಸಾಕ್ಷಿ ಸುದ್ದಿ, ಬಾಳೆಹೊನ್ನೂರು

ಹಿರಿಯ ಸಾಹಿತಿ ಡಾ. ಪಂಚಾಕ್ಷರಿ ಹಿರೇಮಠರ ಅಗಲಿಕೆಗೆ ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ತಮ್ಮ ಸಂತಾಪ ವ್ಯಕ್ತಪಡಿಸಿದ್ದಾರೆ.



ಬಹು ಭಾಷಾ ಪಂಡಿತರಾಗಿದ್ದ ಡಾ. ಪಂಚಾಕ್ಷರಿ ಹಿರೇಮಠರು ಶ್ರೀ ರಂಭಾಪುರಿ ಪೀಠದ ಹಲವಾರು ಗ್ರಂಥಗಳಿಗೆ ಸಂಪಾದಕರಾಗಿ ಕಾರ್ಯ ನಿರ್ವಹಿಸಿದ್ದರು. ಶ್ರೀ ಪೀಠದ ಮುಖವಾಣಿ 'ರಂಭಾಪುರಿ ಬೆಳಗು' ಪತ್ರಿಕೆಗೆ ಕೆಲವು ವರ್ಷಗಳ ಕಾಲ ಸಂಪಾದಕರಾಗಿ ಕಾರ್ಯ ನಿರ್ವಹಿಸಿ ಪತ್ರಿಕೆಗೆ ಮೆರಗು ತಂದಿದ್ದನ್ನು ಮರೆಯುವಂತಿಲ್ಲ. ಸರಳ ಸಜ್ಜನಿಕೆಯ ವ್ಯಕ್ತಿತ್ವ ಹೊಂದಿದ ಅವರು ಶ್ರೀ ಪೀಠದೊಡನೆ ನಿಕಟ ಸಂಪರ್ಕ ಹೊಂದಿದ್ದರು. ಅವರ ಅಗಲಿಕೆ ನೋವನ್ನುಂಟು ಮಾಡಿದೆ.

ಅಗಲಿದ ಅವರ ಪವಿತ್ರ ಆತ್ಮಕ್ಕೆ ದ'ಂು'ಾ ಫ'ನ'ನಾ'ದ ಪರಮಾತ್ಮನು ಚಿರಶಾಂತಿ ನೀಡಲಿ ಮತ್ತು ಅವರ ಅಗಲಿಕೆಯ ನೋವನ್ನು ಸಹಿಸುವ ಶಕ್ತಿಯನ್ನು ಅವರ ಕುಟುಂಬ ವರ್ಗಕ್ಕೆ ನೀಡಲಿ ಎಂದು ಶ್ರೀ ರಂಭಾಪುರಿ ಜಗದ್ಗುರುಗಳು ಸಂತಾಪ ಸೂಚಕ ಸಂದೇಶದಲ್ಲಿ ತಿಳಿಸಿದ್ದಾರೆ.


## ಗ್ರಾಮ ಪಂಚಾಯತ ಕಾರ್ಯಾಲಯ, ಬೆಳವಣಕಿ

ತಾಲೂಕ : ರೋಣ e-mail : belavanaki.Ron.gdg@gmail.com ಜಿಲ್ಲಾ : ಗದಗ

ನಂ: ಗ್ರಾ.ಪಂ ಬೆಳವಣಕಿ/ಟೆಂಡರ್/2024-25/379 ದಿನಾಂಕ: 15/03/2025

### ಕೆಪಿಪಿ ಪೋರ್ಟಲ್ ಟೆಂಡರ್ ಪ್ರಕಟಣೆ (ದ್ವಿ-ಲಕೋಟಿ)

ಕರ್ನಾಟಕ ಸಾರ್ವಜನಿಕ ಪಾರದರ್ಶಕತೆ ಆಕ್ಟ್-2000 ನಿಯಮದಂತೆ ನಿಯಮಗಳನ್ವಯ ಅರ್ಹ ಗುತ್ತೇದಾರ್ರ/ಸರಬರಾಜುದಾರರಿಂದ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್, ಮುಖಾಂತರ 02 ಕಾಮಗಾರಿಯ ಗುಣಮಟ್ಟದ ಸಾಮಗ್ರಿ ಪೂರೈಕೆಯ ಟೆಂಡರ್‌ನ್ನು ಆಹ್ವಾನಿಸಲಾಗಿದೆ. ಲೆಕ್ಕ ಶೀರ್ಷಿಕೆ: 2024-25ನೇ ಸಾಲಿನ MGNREGA ಯೋಜನೆ ಅಡಿ ಟೆಂಡರ್‌ನ್ನು ಆಹ್ವಾನಿಸಲಾಗಿದೆ. ಗುತ್ತಿಗೆದಾರ್ರ/ಸರಬರಾಜುದಾರರು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್, https://kppp.karnataka.gov.in ಮುಖಾಂತರ ಭಾಗವಹಿಸಬಹುದು. ಕಾಮಗಾರಿಗಳ ವರ್ಕ್ ಇಂಡೆಂಟ್ ಸಂಖ್ಯೆಗಳು ಈ ಕೆಳಗಿನಂತೆ ಇರುತ್ತವೆ.

| ಕ್ರ.ಸಂ. | ಇಂಡೆಂಟ್ ನಂಬರ್ | ಟೆಂಡರಿಗಿಟ್ಟ ಮೊತ್ತ |
|---|---|---|
| 1 | RDPR/2024-25/IND8704 | ರೂ. 7,55,350.34 |
| 2 | RDPR/2024-25/IND8708 | ರೂ. 7,55,350.34 |

**ಟೆಂಡರ್ ಅರ್ಜಿಯ ಬೆಲೆ ಹಾಗೂ ಇ.ಎಂ.ಡಿ ಮೊತ್ತದ ವಿವರ :** ಅರ್ಜಿ ಬೆಲೆ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್ ನಂತೆ, ಇ.ಎಂ.ಡಿ. ಸಂಬಂದಪಟ್ಟ ವರ್ಕ್ ಇಂಡೆಂಟ್‌ನಲ್ಲಿ ನೋಡಬಹುದಾಗಿದೆ.

ಇ-ಪ್ರೋಕ್ಯೂರಮೆಂಟ್ ಮುಖಾಂತರ ಅರ್ಜಿ ಹಾಗೂ ಶೆಡ್ಯೂಲ್-ಬಿ ಯನ್ನು ವೆಬ್‌ಸೈಟಿನಲ್ಲಿ ಭರ್ತಿ ಮಾಡಿ ಸಲ್ಲಿಸುವ ದಿನಾಂಕ:-17-03-2025 ರಿಂದ 24-03-2025 ರಂದು 16.00 ಗಂಟೆಯವರೆಗೆ. ತಾಂತ್ರಿಕ ಬಿಡ್ ಟೆಂಡರ್ ತೆರೆಯುವ ದಿನಾಂಕ: 25-03-2025 ರಂದು 16.30 ಗಂಟೆಗೆ ಆರ್ಥಿಕ ಬಿಡ್ ದಿ: 27-03-2025 ರಂದು 11.30 ಗಂಟೆಗೆ ತೆರೆಯಲಾಗುವುದು. ಹೆಚ್ಚಿನ ಮಾಹಿತಿಯನ್ನು ಈ ಕಚೇರಿಯ ಕೆಲಸದ ವೇಳೆಯಲ್ಲಿ ಪಡೆಯಬಹುದು.

ಸಹಿ ಆಗಿದೆ/-
**ಪಂಚಾಯತ ಅಭಿವೃದ್ಧಿ ಅಧಿಕಾರಿಗಳು**
ಗ್ರಾಮ ಪಂಚಾಯತ ಬೆಳವಣಕಿ
ತಾಲೂಕ: ರೋಣ ಜಿಲ್ಲಾ : ಗದಗ.


### ಸಂಗೀತ ಸೌರಭ, ನಗೆ ಹಬ್ಬ ಸಮಾರಂಭದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು

# ಸಂಗೀತ ಮನಕ್ಕೆ ಮುದ ನೀಡುತ್ತದೆ

■ ವಿಜಯಸಾಕ್ಷಿ ಸುದ್ದಿ, ಬಾಳೆಹೊನ್ನೂರು

ಜೀವನದ ಜಂಜಾಟದಲ್ಲಿ ಮುಳುಗಿರುವ ಮನುಷ್ಯನ ಮನಕ್ಕೆ ಸಂಗೀತ ಮುದ ನೀಡುತ್ತದೆ. ಅನೇಕ ರೋಗಗಳಿಗೆ ಸಂಗೀತ ಸಂಜೀವಿನಿಯಾಗಿದೆ. ಗಿಡ-ಮರಗಳೂ ಸಂಗೀತವನ್ನು ಆಸ್ವಾದಿಸುತ್ತವೆ ಎಂಬುದು ವೈಜ್ಞಾನಿಕ ಸತ್ಯವಾಗಿದೆ ಎಂದು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯ ಪಟ್ಟರು.

ಅವರು ಶ್ರೀ ಜಗದ್ಗುರು ರಂಭಾಪುರಿ ಪೀಠದಲ್ಲಿ ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವ ಹಾಗೂ ಕ್ಷೇತ್ರನಾಥ ಶ್ರೀ ವೀರಭದ್ರಸ್ವಾಮಿ ಮಹಾರಥೋತ್ಸವದ ಅಂಗವಾಗಿ ಜರುಗಿದ ಸಂಗೀತ-ಸೌರಭ ಹಾಗೂ ನಗೆ ಹಬ್ಬ ಸಮಾರಂಭದ ಸಾನ್ನಿಧ್ಯ



ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಸಂಗೀತ ಆಸ್ವಾದಿಸುವುದರ ಜೊತೆಗೆ ಮನುಷ್ಯನಿಗೆ ಹಾಸ್ಯ ಪ್ರಜ್ಞೆಯೂ ಮುಖ್ಯವಾಗಿದೆ. ನಗುವುದರಿಂದ ಮನಸ್ಸು ಉಲ್ಲಸಿತಗೊಳ್ಳುತ್ತದೆ. ಮೈ, ನರ-ನಾಡಿಗಳು ಸಡಿಲಗೊಳ್ಳುತ್ತವೆ. ಉತ್ತಮ ಹಾಸ್ಯದ ಮೂಲಕ ಜನರನ್ನು ನಗಿಸುವುದೂ ಒಂದು ಕಲೆಯಾಗಿದೆ ಎಂದರು.

ಮಲೆಬೆನ್ನೂರಿನ ಜೆಡಿಎಸ್ ಮುಖಂಡ ಬಿ.ಚಿದಾನಂದಪ್ಪ ಕಾರ್ಯಕ್ರಮ ಉದ್ಘಾಟಿಸಿದರು. ಸಮಾರಂಭದಲ್ಲಿ ಮುಕ್ತಿಮಂದಿರ, ಸುಳ್ಳ, ನಿಲೋಗಲ್ಲ, ಕಲಾದಗಿ, ಕವಲೇದುರ್ಗ, ಬಿಳಕಿ, ಬೇರುಗಂಡಿ, ಹಾರನಹಳ್ಳಿ ಕೆಂಭಾವಿ, ಸಿಂದಗಿ, ಸಂಗೊಳ್ಳಿ, ಸಿದ್ಧರಬೆಟ್ಟ, ಜಕ್ಕಲಿ-ಹಾರನಹಳ್ಳಿ ಮಠಗಳ ಶ್ರೀಗಳು ಉಪಸ್ಥಿತರಿದ್ದರು. ಕಲಬುರ್ಗಿ ಚವದಾಪುರಿ ಹಿರೇಮಠದ ಡಾ. ರಾಜಶೇಖರ ಶಿವಾಚಾರ್ಯ ಸ್ವಾಮಿಗಳು ನೇತೃತ್ವ ವಹಿಸಿದ್ದರು.

ಡಾ. ರಾಜಗುರು ಗುರುಸ್ವಾಮಿ ಕಲಕೇರಿ ನಡೆಸಿಕೊಟ್ಟ ಸಂಗೀತ ಸೌರಭ ಜನಮನವನ್ನು ಸೂರೆಗೊಂಡಿತು. ಇವರ ಸಂಗೀತಕ್ಕೆ ಬಸಲಿಂಗಯ್ಯ ಹಿರೇಮಠ ತಬಲಾ ಸಾಥ್ ನೀಡಿದರೆ, ಗುರುಲಿಂಗಸ್ವಾಮಿ ಹಿತ್ತಲ ಶಿರೂರ ಹಾರ್ಮೋನಿಯಂ ಸಾಥ್ ನೀಡಿದರು. ಟಿ.ವಿ ಹಾಸ್ಯ ಕಲಾವಿದ ಶರಣು ಹಿರೇಮಠ ಹಲವಾರು ಸಂಗತಿಗಳನ್ನು ಹಾಸ್ಯಭರಿತವಾಗಿ ಹೇಳುವ ಮೂಲಕ ಜನರನ್ನು ನಗೆಗಡಲಲ್ಲಿ ತೇಲಿಸಿದರು. ಗದಗ ಜಾನಪದ ಸಂಜೀವಿನಿಯ ಗವಿಸಿದ್ದಯ್ಯ ಹಳ್ಳಿಕೇರಿಮಠ ಜಾನಪದ ಹಾಡುಗಳ ಮೂಲಕ ಜನತೆಯನ್ನು ರಂಜಿಸಿದರು.

ಶ್ರೀ ಜಗದ್ಗುರು ರೇಣುಕಾಚಾರ್ಯ ಗುರುಕುಲದ ಸಾಧಕರಿಂದ ವೇದಘೋಷ ಜರುಗಿತು. ಸಿಂಧನೂರು-ಕನ್ನೂರು ಮಠದ ಸೋಮನಾಥ ಶಿವಾಚಾರ್ಯ ಸ್ವಾಮಿಗಳು ಸ್ವಾಗತಿಸಿದರು. ಮಳಲಿ ಸಂಸ್ಥಾನಮಠದ ಡಾ. ನಾಗಭೂಷಣ ಶಿವಾಚಾರ್ಯ ಸ್ವಾಮಿಗಳು ನಿರೂಪಿಸಿದರು.

ಸಮಾರಂಭದ ನಂತರ ಹುಬ್ಬಳ್ಳಿಯ ಜೀವಿ ಚಿತ್ರಾಲಯದವರು ನಿರ್ಮಿಸಿರುವ ಗುರುಜೀವಿ ನಿರ್ದೇಶನದ 'ರೇಣುಕ ಬೋಧೆ' ಟೆಲಿಫಿಲ್ಮ್ ಪ್ರದರ್ಶನವನ್ನು ಶ್ರೀ ರಂಭಾಪುರಿ ಜಗದ್ಗುರುಗಳು ಉದ್ಘಾಟಿಸಿ, ವೀಕ್ಷಿಸಿ ಶುಭ ಹಾರೈಸಿದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka